www.janavaadi.in

# ಜನವಾದಿ

ರಾಯಚೂರು
ಕಲಬುರಗಿ
ಯಾದಗಿರಿ
ಕೊಪ್ಪಳ
ಬಳ್ಳಾರಿ
ಬೀದರ್

ಸಂಪಾದಕ : ಬಸವರಾಜ ಹೆಚ್
Editor : Basavaraj H

ಜನರ ಅಂತರಂಗದ ಧ್ವನಿ
ಕನ್ನಡ ದಿನಪತ್ರಿಕೆ

JANAVAADI
Kannada Daily News Paper

ಸಂಪುಟ : 11 ಸಂಚಿಕೆ : 231 ಪುಟ:4 ರಾಯಚೂರು ಶುಕ್ರವಾರ 04–04–2025 RNI NO.KARKAN/2012/56428 ಮೊಬೈಲ್: 9448300139,9449711232. e-mail : janavaadi@gmail.com ಬೆಲೆ : 2 ರೂ.
VOLUME : 11 ISSUE : 231 PAGES : 4 RAICHUR FRIDAY 04-04-2025 RNI NO.KARKAN/2012/56428 MOBILE:9448300139,9449711232. E-MAIL:janavaadi@gmail.com PRICE : 2 RS.

## ಬಿಳಿಜೋಳ ಖರೀದಿಗೆ ಜೂನ್ 30ರವರೆಗೆ ಅವಧಿ ವಿಸ್ತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

ಜನವಾದಿ ವಾರ್ತೆ

ರಾಯಚೂರು ಏ 03 – ಇಲ್ಲಿನ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2024–25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬಿಳಿ ಜೋಳ ಖರೀದಿಸುವ ಅವಧಿಯನ್ನು ಜೂನ್ 30ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಅಧ್ಯಕ್ಷರಾದ ಹಾಗೂ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಬಿಳಿಜೋಳವನ್ನು ಮಾರಾಟ ಮಾಡಲು ದಿನಾಂಕ: 31.03.2025ರವರೆಗೆ ನೋಂದಣಿ ಮಾಡಿಕೊಂಡಿರುವ ಜಿಲ್ಲೆಯ ರೈತರಿಂದ ಖರೀದಿಸುವ ಅವಧಿಯನ್ನು ಜೂನ್ 30ರವರೆಗೆ ವಿಸ್ತರಿಸಲಾಗಿದ್ದು, ರೈತರು ತಮ್ಮ ಹತ್ತಿರದಲ್ಲಿರುವ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್ಎಕ್ಯೂ ಗುಣಮಟ್ಟದ ಮುಂಗಾರು ಬಿಳಿಜೋಳವನ್ನು ಈಗಾಗಲೇ ನೋಂದಣಿ ಮಾಡಿಸಿಕೊಂಡಿರುವ ರೈತರು ಖರೀದಿ ಕೇಂದ್ರಗಳಿಗೆ ನೀಡುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಯಚೂರು ಪೇಟೆ ದರ

| | |
|---|---|
| **ಸಣ್ಣ ಭತ್ತ(ಸೋನಾ)** | |
| ಕನಿಷ್ಠ | 2011 |
| ಗರಿಷ್ಠ | 2339 |
| **ಒಣಕಡಲೆ** | |
| ಕನಿಷ್ಠ | 5450 |
| ಗರಿಷ್ಠ | 5756 |
| **ಕೆಂಪು ತೊಗರಿ** | |
| ಕನಿಷ್ಠ | 6979 |
| ಗರಿಷ್ಠ | 7479 |
| **ಶೇಂಗಾ (ಗುಂಗ್ರು)** | |
| ಕನಿಷ್ಠ | 3805 |
| ಗರಿಷ್ಠ | 6050 |
| **ಸೂರ್ಯಕಾಂತಿ** | |
| ಕನಿಷ್ಠ | 3815 |
| ಗರಿಷ್ಠ | 3815 |
| **ಈರುಳ್ಳಿ** | |
| ಕನಿಷ್ಠ | 2100 |
| ಗರಿಷ್ಠ | 4190 |

# ಡಿ.ಕೆ ಶಿವಕುಮಾರ್ ಜೊತೆ ಯಾವುದೇ ಭಿನ್ನಾಭಿಪ್ರಾಯವಿಲ್ಲ, ನಾಯಕತ್ವ ಬದಲಾವಣೆ ಸಹಜ: ಗೃಹ ಸಚಿವ ಜಿ ಪರಮೇಶ್ವರ




ಬೆಂಗಳೂರು ಏ 3– ತಮ್ಮ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಗೃಹ ಸಚಿವ ಜಿ ಪರಮೇಶ್ವರ ಗುರುವಾರ ಸಮರ್ಥಿಸಿಕೊಂಡರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಕೆಲವು ನಾಯಕರು ರಾಜ್ಯ ಕಾಂಗ್ರೆಸ್ ಅಧ್ಯಕ್ಷರು ಬದಲಾಗಬೇಕು ಎಂದು ಬಯಸುತ್ತಾರೆ. ಆದರೆ, ಇತರ ಕೆಲವರು ಶಿವಕುಮಾರ್ ಅವರೇ ಮುಂದುವರಿಯಬೇಕು ಎಂದು ಭಾವಿಸುತ್ತಾರೆ. ನಾನು ಕೆಪಿಸಿಸಿ ಅಧ್ಯಕ್ಷನಾಗಿದ್ದಾಗಲೂ ಇದೇ ರೀತಿಯ ಪರಿಸ್ಥಿತಿ ಇತ್ತು. ಹೈಕಮಾಂಡ್ ಪಕ್ಷದ ನಾಯಕರೊಂದಿಗೆ ಸಮಾಲೋಚಿಸಿ ಎರಡನೇ ಅವಧಿಗೆ ಮುಂದುವರಿಯಲು ನನಗೆ ಅವಕಾಶ ನೀಡಿತು' ಎಂದು ಹೇಳಿದರು.

ತಮ್ಮ ಮತ್ತು ಶಿವಕುಮಾರ್ ನಡುವಿನ ಭಿನ್ನಾಭಿಪ್ರಾಯಗಳು ಹೆಚ್ಚಾಗುತ್ತಿವೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, 'ನನ್ನ ಮತ್ತು ರಾಜ್ಯಾಧ್ಯಕ್ಷ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ. ನಾನು ಅವರನ್ನು ಅವರ ನಿವಾಸದಲ್ಲಿ ಭೇಟಿಯಾಗಬಹುದು ಮತ್ತು ನಮ್ಮ ನಡುವೆ ಯಾವುದೇ ಸಮಸ್ಯೆ ಇಲ್ಲ. ನಾವು ತುಂಬಾ ಒಳ್ಳೆಯ ಸ್ನೇಹಿತರು' ಎಂದು ಹೇಳಿದರು.

'ನನಗೆ ಪಕ್ಷದ ಯಾವುದೇ ಆಂತರಿಕ ವಿವಾದಗಳ ಬಗ್ಗೆ ತಿಳಿದಿಲ್ಲ. ಇದು ಮಾಧ್ಯಮಗಳು ಸೃಷ್ಟಿಸಿದ ನಿರೂಪಣೆ. ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದೆ ಮತ್ತು ಕಾರ್ಯಕ್ರಮಗಳನ್ನು ನೀಡುತ್ತಿದ್ದೇವೆ. ಸಣ್ಣ ಭಿನ್ನಾಭಿಪ್ರಾಯಗಳು ಸಹಜ. ಆದರೆ, ಅವು ಆಂತರಿಕ ಸಂಘರ್ಷಗಳಿಗೆ ಕಾರಣವಾಗುವುದಿಲ್ಲ' ಎಂದು ತಿಳಿಸಿದರು.

ದೆಹಲಿಯಲ್ಲಿ ನಡೆದ ಕರ್ನಾಟಕ ಭವನ ಉದ್ಘಾಟನಾ ಕಾರ್ಯಕ್ರಮ ಮತ್ತು ತಮ್ಮ ಹುಟ್ಟೂರು ತುಮಕೂರಿನಲ್ಲಿ ನಡೆದ ಸಿದ್ದಗಂಗಾ ಮಠದ ಕಾರ್ಯಕ್ರಮಕ್ಕೆ ಗೈರುಹಾಜರಾದ ಬಗ್ಗೆ ಕೇಳಿದಾಗ, 'ಕರ್ನಾಟಕ ಭವನ ಕಟ್ಟಡಕ್ಕೆ ಶಿಲಾನ್ಯಾಸ ಮಾಡಿದ್ದು ನಾನೇ. ಈಗ ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದ್ದಾರೆ. ಆ ಸಮಯದಲ್ಲಿ ನಾನು ಉಪಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸುತ್ತಿದ್ದೆ. ವಿವಿಧ ಕಾರಣಗಳಿಗಾಗಿ, ನನ್ನನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿಲ್ಲ. ಆಹ್ವಾನವಿಲ್ಲದೆ, ನವದೆಹಲಿಗೆ ಪ್ರಯಾಣಿಸಿ ಆ ಕಾರ್ಯಕ್ರಮಕ್ಕೆ ಹೇಗೆ ಹಾಜರಾಗಲು ಸಾಧ್ಯ?. ಹೀಗಾಗಿ ನಾನು ಕಾರ್ಯಕ್ರಮಕ್ಕೆ ಹಾಜರಾಗಲಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಡೀ ಸಂಪುಟವನ್ನು ಪ್ರತಿನಿಧಿಸುತ್ತಾರೆ ಮತ್ತು ನನ್ನ ವೈಯಕ್ತಿಕ ಉಪಸ್ಥಿತಿಯ ಅಗತ್ಯವಿರಲಿಲ್ಲ' ಎಂದರು.

ಸಿದ್ದಗಂಗಾ ಮಠದ ಕಾರ್ಯಕ್ರಮದ ಕುರಿತು ಮಾತನಾಡಿದ ಅವರು, 'ನನ್ನ ಕುಟುಂಬ ಸಿದ್ದಗಂಗಾ ಮಠದೊಂದಿಗೆ ಉತ್ತಮ ಸಂಬಂಧ ಹೊಂದಿದೆ. ನನ್ನ ತಂದೆಗೆ ದಿವಂಗತ ಶಿವಕುಮಾರ ಸ್ವಾಮೀಜಿ ಅವರೊಂದಿಗೆ ನಿಕಟ ಸಂಬಂಧವಿತ್ತು. ಕಾರ್ಯಕ್ರಮದ ಸಮಯದಲ್ಲಿ ನಾನು ಬೇರೆ ಕಾರ್ಯದಲ್ಲಿ ನಿರತನಾಗಿದ್ದೆ. ನನಗೆ ಅನಿಸಿದಾಗಲೆಲ್ಲಾ ಮಠಕ್ಕೆ ಭೇಟಿ ನೀಡುತ್ತೇನೆ" ಎಂದು ಹೇಳಿದರು.

ಸಹಕಾರ ಸಚಿವ ಕೆಎನ್ ರಾಜಣ್ಣ ಅವರ ಹನಿ ಟ್ರ್ಯಾಪ್ ಪ್ರಕರಣದ ಬಗ್ಗೆ ಪ್ರತಿಕ್ರಿಯಿಸಿದ ಪರಮೇಶ್ವರ, ತನಿಖೆ ಪೂರ್ಣಗೊಳ್ಳುವವರೆಗೆ ಯಾವುದೇ ತೀರ್ಮಾನಗಳನ್ನು ತೆಗೆದುಕೊಳ್ಳಲು ಸಾಧ್ಯವಿಲ್ಲ. ಈ ಹಂತದಲ್ಲಿ, ಹನಿ ಟ್ರ್ಯಾಪ್ ಪ್ರಕರಣ ಮತ್ತು ಸಚಿವ ರಾಜಣ್ಣ ಅವರ ಪುತ್ರ ಎಂಎಲ್ಸಿ ರಾಜೇಂದ್ರ ರಾಜಣ್ಣ ಅವರು ದಾಖಲಿಸಿರುವ ಕೊಲೆ ಯತ್ನ ಪ್ರಕರಣದ ಬಗ್ಗೆ ನಾನು ಪ್ರತಿಕ್ರಿಯಿಸುವುದು ಸೂಕ್ತವಲ್ಲ ಎಂದು ಅವರು ಹೇಳಿದರು.

ಪಕ್ಷದ ಆಂತರಿಕ ಒತ್ತಡದಿಂದಾಗಿ ಸಚಿವ ರಾಜಣ್ಣ ಹನಿ ಟ್ರ್ಯಾಪ್ ಪ್ರಕರಣದ ಬಗ್ಗೆ ಮೌನವಾಗಿದ್ದಾರೆಯೇ ಎಂದು ಕೇಳಿದಾಗ, 'ಆ ರೀತಿ ಏನೂ ಇಲ್ಲ' ಎಂದು ಪರಮೇಶ್ವರ್ ನಿರಾಕರಿಸಿದರು.

### ರಾಯಚೂರು ಜಿಲ್ಲೆ
ಇಂದಿನ ಹವಾಮಾನ ಮುನ್ಸೂಚನೆ



ಗರಿಷ್ಠ : 36 ಸೆಲ್ಸಿಯಸ್
ಕನಿಷ್ಠ : 27 ಸೆಲ್ಸಿಯಸ್

## ಏಪ್ರೀಲ್, ಮೇ ತಿಂಗಳಿನ ಕಚೇರಿ ಕೆಲಸದ ವೇಳೆ ಬದಲಾವಣೆ ಬದಲಾದ ಸಮಯದಲ್ಲಿ ಎಂದಿನಂತೆ ಕರ್ತವ್ಯ ನಿರ್ವಹಣೆಗೆ ಜಿಲ್ಲಾಧಿಕಾರಿಗಳಿಂದ ಆದೇಶ

ಜನವಾದಿ ವಾರ್ತೆ



ರಾಯಚೂರು ಏ 03 – ಸರ್ಕಾರದ ಆದೇಶದನ್ವಯ 2025ನೇ ಸಾಲಿನ ಏಪ್ರೀಲ್ ಮತ್ತು ಮೇ ತಿಂಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನದ ಹಿನ್ನೆಲೆಯಲ್ಲಿ ಕಲಬುರಗಿ ವಿಭಾಗ ವ್ಯಾಪ್ತಿಯ ರಾಯಚೂರ ಜಿಲ್ಲೆಯಲ್ಲಿ ಸಹ 2025ರ ಏಪ್ರೀಲ್ ಮತ್ತು ಮೇ ತಿಂಗಳಿನಲ್ಲಿ ಕಚೇರಿ ಕೆಲಸದ ವೇಳೆ ಬದಲಾವಣೆಯಾಗಿದ್ದು, ರಾಯಚೂರು ಜಿಲ್ಲೆಯಲ್ಲಿನ ಎಲ್ಲಾ ಸರ್ಕಾರಿ ನೌಕರರು ಬದಲಾದ ಸಮಯದಲ್ಲಿ ತಮ್ಮ ಕರ್ತವ್ಯವನ್ನು ಎಂದಿನಂತೆ ಯಾವುದೇ ಲೋಪ ಅಡೆತಡೆಯಿಲ್ಲದೆ, ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾ–ರಿಗಳಾದ ನಿತೀಶ್ ಕೆ., ಅವರು ಆದೇಶ ಹೊರಡಿಸಿದ್ದಾರೆ.

ಬೆಳಗಾವಿ ವಿಭಾಗದ ವಿಜಯಪುರ, ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳ ಸರ್ಕಾರಿ ಕಚೇರಿಗಳ ವೇಳಾಪಟ್ಟಿ ಬದಲಾಗಿದ್ದು, ಏಪ್ರೀಲ್ ಮತ್ತು ಮೇ ತಿಂಗಳುಗಳಲ್ಲಿ ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 1.30 ಗಂಟೆವರೆಗೆ ಬದಲಾಯಿಸಲಾಗಿದೆ. ಆದ್ದರಿಂದ ಸರ್ಕಾರದ ಆದೇಶದಂತೆ ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರು ಬದಲಾದ ಸಮಯದಲ್ಲಿ ತಮ್ಮ ಕರ್ತವ್ಯವನ್ನು ಎಂದಿನಂತೆ ಯಾವುದೇ ಲೋಪ ಅಡೆತಡೆಯಿಲ್ಲದೆ ಸಾರ್ವಜನಿಕರಿಗೆ ಯಾವುದೇ ಅನಾನುಕೂಲತೆಯಾಗದಂತೆ ಮತ್ತು ಜಿಲ್ಲಾಧಿಕಾರಿಗಳು ಅಥವಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತುರ್ತು ಸಂದರ್ಭದಲ್ಲಿ ಯಾವುದೇ ಕಾರ್ಯ ನಿರ್ವಹಿಸಲು ನಿರ್ದೇಶಿಸಿದಲ್ಲಿ ಸಮಯದ ಪರಿಮಿತಿಯಿಲ್ಲದೆ ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

## ರಿಮ್ಸ್ ಆಸ್ಪತ್ರೆಗೆ ಜಿಲ್ಲಾಧಿಕಾರಿ ನಿತೀಶ್ ಕೆ. ದಿಢೀರ್ ಭೇಟಿ; ಪರಿಶೀಲನೆ

ಜನವಾದಿ ವಾರ್ತೆ




ರಾಯಚೂರು ಏ 03 – ಇಲ್ಲಿನ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಶೋಧನಾ ಸಂಸ್ಥೆ ರಿಮ್ಸ್ ಆಸ್ಪತ್ರೆಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಏಪ್ರೀಲ್ 2ರ ಸಂಜೆ ದಿಢೀರ್ ಭೇಟಿ ನೀಡಿ ಆಸ್ಪತ್ರೆಯ ಮೂಲಸೌಕರ್ಯಗಳನ್ನು ಪರಿಶೀಲಿಸಿದರು.

ಹೆರಿಗೆ ಮತ್ತು ಮಕ್ಕಳ ಆಪರೇಷನ್ ವಿಭಾಗವನ್ನು ಇನ್ನಷ್ಟು ಅಭಿವೃದ್ಧಿ ಮಾಡಲು ಹೆಚ್ಚಿನ ವೈದ್ಯರು ಹಾಗೂ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಬೇಕು. ಸಣ್ಣ ಮಕ್ಕಳ ಐಸಿಯು ಘಟಕವನ್ನು ವಿಸ್ತರಣೆ ಮಾಡಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

14 ವರ್ಷದ ಮಕ್ಕಳಿಗೆ ಉತ್ತಮ ಚಿಕಿತ್ಸೆ ದೊರೆಕಿಸಲು ಪ್ರಸ್ತುತ ಆಸ್ಪತ್ರೆಯಲ್ಲಿರುವ ಪಿಐಸಿಯು 12 ಹಾಸಿಗೆಯಿಂದ 20 ಹಾಸಿಗೆಗೆ ಹೆಚ್ಚಳ ಮಾಡಬೇಕು. ಇದಕ್ಕಾಗಿ ಬೇಕಾಗಿರುವ ಕೊಠಡಿ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಳ್ಳಬೇಕು. ಅಲ್ಲದೆ ಮಾಡ್ಯೂಲರ್ ಆಪರೇಷನ್ ಥಿಯೇಟರ್ ಸಂಖ್ಯೆ 4ಕ್ಕೆ ಹೆಚ್ಚಳ ಮಾಡಲು ಸೂಕ್ತ ಕ್ರಮವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಹೆಚ್ಚು ಒತ್ತು ನೀಡಬೇಕು. ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡುವುದರ ಜೊತೆಗೆ ಅವರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ನಿರ್ದೇಶನ ನೀಡಿದರು.

ರೋಗಿಗಳಿಗೆ ಉತ್ತಮವಾದ ವೈದ್ಯಕೀಯ ಸೇವೆ ನೀಡಿ: ನಂತರ ವಿವಿಧ ವಾರ್ಡ್‌ಗಳಿಗೆ ತೆರಳಿ ಅಲ್ಲಿನ ಮೂಲ

☛4

## ಎಲಾನ್ ಮಸ್ಕ್ ವಿಶ್ವದ ಶ್ರೀಮಂತ ಉದ್ಯಮಿ

ನ್ಯೂಯಾರ್ಕ್ ಏ 3– ವಿಶ್ವದ ಶ್ರೀಮಂತರ ಪಟ್ಟಿ ಅಮೆರಿಕದ ಎಲಾನ್ ಮಸ್ಕ್ ಮೊದಲ ಸ್ಥಾನ ಪಡೆದಿದ್ದಾರೆ. ಫೋರ್ಬ್ಸ್ ಮ್ಯಾಗಜಿನ್ ಬಡುಗಡೆ ಮಾಡಿರುವ ಪಟ್ಟಿಯಲ್ಲಿ ಉದ್ಯಮಿ ಹಾಗು ಅಮೆರಿದ ಟ್ರಂಪ್ ಸರ್ಕಾರದ ಸಚಿವ ಎಲಾನ್ ಮಸ್ಕ್ 29 ಲಕ್ಷ ಕೋಟಿ ರು.ಆಸ್ತಿ ಒಡೆಯನಾಗಿದ್ದು ವಿಶ್ವದ ಶ್ರೀಮಂತ ವ್ಯಕ್ತಿ ಎಂದು ಹೆಸರಿಸಿದೆ.

ಫೇಸ್‌ಬುಕ್ ಮಾರ್ಕ್ ಜುಗರಬರ್ಗ್ 19 ಲಕ್ಷ ಕೋಟಿ ರು.ನೊಂದಿಗೆ 2ನೇ ಸ್ಥಾನದಲ್ಲಿದ್ದರೆ .ಜೆಬ್ ಬೆಜೋಸ್ 18 ಲಕ್ಷ ಕೋಟಿ ರು. ಆಸ್ತಿಯೊಂದಿಗೆ 3ನೇ ಸ್ಥಾನ ಪಡೆದಿದ್ದಾರೆ. ಇನ್ನು ಭಾರತದ ಮುಕೇಶ್ ಅಂಬಾನಿ ಟಾಪ್ 10ರ ಪಟ್ಟಿಯಿಂದ ಹೊರಬಿದ್ದಿದ್ದಾರೆ. ಪ್ರಸ್ತುತ 7.85 ಲಕ್ಷ ಕೋಟಿ ರು. ಆಸ್ತಿಯೊಂದಿಗೆ 18ನೇ ಸ್ಥಾನ ಪಡೆದಿದ್ದಾರೆ.

ಉಳಿದಂತೆ 4.8 ಲಕ್ಷ ಕೋಟಿ ರು. ಆಸ್ತಿ ಹೊಂದಿರುವ ಗೌತಮ್ ಅದಾನಿ 28ನೇ ಸ್ಥಾನ, 4.7 ಲಕ್ಷ ಕೋಟಿ ರು. ಆಸ್ತಿ ಹೊಂದಿರುವ ಸಾವಿತ್ರಿ ಜಿಂದಾಲ್ 56ನೇ ಸ್ಥಾನ ಪಡೆದಿದ್ದಾರೆ. ವರದಿ ಅನ್ವಯ ವಿಶ್ವದಲ್ಲಿ 3028 ಶತಕೋಟ್ಯಧಿಪತಿಗಳಿದ್ದಾರೆ.

## ಏಮ್ಸ್: ಪ್ರಧಾನಿ ಬಳಿ ಸರ್ವ ಪಕ್ಷಗಳ ಸಂಸದರ ನಿಯೋಗ ಹೋಗಲು ವೇದಿಕೆ ಸಜ್ಜು–ಬಸವರಾಜ ಕಳಸ

ಜನವಾದಿ ವಾರ್ತೆ



ರಾಯಚೂರು ಏ 03– ಏಮ್ಸ್ ಹೋರಾಟ ಸಮಿತಿ ನಿಯೋಗ ದೆಹಲಿಗೆ ಭೇಟಿ ನೀಡಿ ದಿ.16 ರಿಂದ 29 ರವರೆಗೆ 13 ದಿನಗಳ ಕಾಲ ದೆಹಲಿಯಲ್ಲಿಯೇ ಠಿಕಾಣಿ ಹೂಡಿ ಕೇಂದ್ರ ಸಚಿವರು, ಸರ್ವ ಪಕ್ಷಗಳ ಒಟ್ಟು 28 ಸಂಸದರು ಹಾಗೂ 17 ಜನ ರಾಜ್ಯ ಸಭಾ ಸದಸ್ಯರನ್ನು ಭೇಟಿಯಾಗಿ ಚರ್ಚಿಸಿದ ಹಿನ್ನಲೆಯಲ್ಲಿ ರಾಯಚೂರಿನಲ್ಲಿ ಏಮ್ಸ್ ಏಮ್ಸ್ ಮಂಜೂರಾತಿ ಸಂಬಂಧಿಸಿದಂತೆ ಸರ್ವ ಪಕ್ಷಗಳ ಸಂಸದರ ನಿಯೋಗ ಪ್ರಧಾನ ಮಂತ್ರಿಗಳ ಬಳಿ ಹೋಗಲು ವೇದಿಕೆ ಸಜ್ಜಾಗಿದೆ ಎಂದು ಏಮ್ಸ್ ಹೋರಾಟ ಸಮಿತಿ ಸಂಚಾಲಕರಾದ ಬಸವರಾಜ ಕಳಸ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಕರದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲೆಯಲ್ಲಿ ನಡೆಯಿತ್ತಿರವ ಏಮ್ಸ್ ಹೋರಾಟದ ಬಗ್ಗೆ ಕೇಂದ್ರದ ಸಚಿವರು,ಸರ್ವ ಪಕ್ಷ ಗಳ ಸಂಸದರು,ರಾಜ್ಯ ಸಭಾ ಸದಸ್ಯರನ್ನು ಭೇಟಿಯಾಗಿ ಮನವರಿಕೆ ಮಾಡಲು ಹೋದ ಕಾರ್ಯ ಯಶಸ್ವಿಯಾಗಿದ್ದು, ನಮ್ಮ ನಿರೀಕ್ಷೆಗೂ ಮೀರಿ ಬೆಂಬಲ ವ್ಯಕ್ತವಾಗಿದೆ ಎಂದರು.ಮಾಜಿ ಮುಖ್ಯ ಮಂತ್ರಿ ಹಾಗೂ ಹಾಲಿ ಸಂಸದರಾದ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿಯಾಗಿ ಚರ್ಚಿಸಿದ್ದು,ಅವರು ಸಂಪೂರ್ಣ ವಾಗಿ ಬೆಂಬಲಿಸುವುದಾಗಿ ಭರವಸೆ ನೀಡಿದ್ದಾರೆ. ತಕ್ಷಣ ಮರುದಿನವೇ ದಿ.19ರಂದು ಕೇಂದ್ರ ಸಚಿವ ಜೆ.ಪಿ.ನಡ್ಡಾ ಅವರಿಗೆ ಪತ್ರ ಬರೆದು ರಾಯಚೂರಿಗೆ ಏಮ್ಸ್ ಮಂಜೂರಾತಿಗೆ ಮನವಿ ಮಾಡಿದ್ದಾರೆ. ಮಾಜಿ ಪ್ರಧಾನಿ ಹಾಲಿ ಸಂಸದ ಹೆಚ್.ಡಿ.ದೇವೇಗೌಡರು, ಕೇಂದ್ರ ಮಂತ್ರಿ ಹಾಗೂ ಹೆಚ್.ಡಿ.

☛4

## ಏ.5 ಕ್ಕೆ ಕರ್ನಾಟಕ ಸಂಘದಲ್ಲಿ ಕವಿಗೋಷ್ಠಿ : ಶ್ರೀನಿವಾಸ ಗಟ್ಟು



ಜನವಾದಿ ವಾರ್ತೆ

ರಾಯಚೂರು ಏ 3– ಕರ್ನಾಟಕ ಸಂಘ ಹಾಗೂ ಹೊಸಮನಿ ಪ್ರಕಾಶನ ವತಿಯಿಂದ ಏ.5ರಂದು ಸಂಜೆ 5 ಗಂಟೆಗೆ ಕರ್ನಾಟಕ ಸಂಘದಲ್ಲಿ ಯುಗಾದಿ ಹಬ್ಬದ ಪ್ರಯುಕ್ತ ವಸಂತ ಕಾವ್ಯ ಕವಿಗೋಷ್ಠಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಕಾರ್ಯದರ್ಶಿ ಶ್ರೀನಿವಾಸ ಗಟ್ಟು ತಿಳಿಸಿದರು.

ಅವರಿಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದವರು ಕವಿಗೋಷ್ಠಿಯಲ್ಲಿ ರಾಯಚೂರು ನಗರ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ 39 ಕ್ಕೂ ಹೆಚ್ಚಿನ ಕವಿಗಳು ಭಾಗವಹಿಸಲಿದ್ದು, ಕಾರ್ಯಕ್ರಮದ ಉದ್ಘಾಟನೆಯನ್ನು ನಿವೃತ್ತ ಪ್ರಾಚಾರ್ಯರಾದ ವೆಂಕಟ–ರಾವ್ ಕುಲಕರ್ಣಿ ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾಗಿ ಪತ್ರಕರ್ತರಾದ ಅರವಿಂದ ಕುಲಕರ್ಣಿ, ಕವಿ ವೇಣು ಜಾಲಿಬೆಂಚಿ, ಸುರಭಿ ಸಾಂಸ್ಕೃತಿಕ ಬಳಗದ ಕಾರ್ಯದರ್ಶಿ ಜಿ.ಬಸವರಾಜ, ಕನ್ನಡ ಮಿತ್ರಕೂಟ ಅಧ್ಯಕ್ಷ ಅಶೋಕಕುಮಾರ ಜೈನ್ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಕವಿಗೋಷ್ಠಿಯ ಅಧ್ಯಕ್ಷತೆಯನ್ನು ನಿವೃತ್ತ ಪ್ರಾಚಾರ್ಯೆ ಹಾಗೂ ಕವಿಯತ್ರಿ ಡಾ.ರಾಜಶ್ರೀ ಕಲ್ಲೂರಕರ್ ವಹಿಸಲಿದ್ದಾರೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಸಂಘದ ಅಧ್ಯಕ್ಷ ಕೆ.ಶಾಂತಪ್ಪ, ಖಜಾಂಚಿ ಹನುಮಂತಪ್ಪ, ಕಾರ್ಯದರ್ಶಿ ಮುರುಳಿಧರ ಕುಲಕರ್ಣಿ, ಹೊಸಮನಿ ಪ್ರಕಾಶನದ ಅಧ್ಯಕ್ಷ ಬಶೀರ ಅಹ್ಮದ್ ಹೊಸಮನಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಸಿಂಧನೂರು: ಬೀದಿ ಬದಿ ವ್ಯಾಪಾರಸ್ಥರು ದಿಢೀರ್ ಪ್ರತಿಭಟನೆ

ಜನವಾದಿ ವಾರ್ತೆ



ಸಿಂಧನೂರು ಏ 2– ಬೀದಿ ಬದಿಯ ವ್ಯಾಪಾರಿಗಳ ತೆರವು ಕಾರ್ಯಾಚರಣೆಯಿಂದ ಜೀವನೋಪಾಯಕ್ಕೆ ಸಮಸ್ಯೆಯಾದವ–ರಿಗೆ ರಕ್ಷಣೆ ನೀಡಬೇಕು ಹಾಗೂ ಪೊಲೀಸರ ಕಿರುಕುಳ ತಪ್ಪಿಸಬೇಕು ಎಂದು ನಡೆದ ನಗರಸಭೆ ಸರ್ವ ಸದಸ್ಯರ ಸಭೆಯಲ್ಲಿ ತಿರ್ಮಾನ ಕೈಗೊಳ್ಳಲಾಗಿದೆ. ಅದನ್ನು ಜಾ–ರಿಗೊಳಿಸಬೇಕು ಒತ್ತಾಯಿಸಿದರು.

ಸಿಂಧನೂರು ನಗರಸಭೆ ಪೌರಾಯುಕ್ತರು ಹಾಗೂ ನಗರಸಭೆ ಅಧ್ಯಕ್ಷರಿಗೆ ಅವರು ಮನವಿ ಸಲ್ಲಿಸಿ. ಬೀದಿ ಬದಿ ವ್ಯಾಪಾರಸ್ಥರು ಅನುಕೂಲ ಮಾಡಿಕೊಳ್ಳುವ ನಿಟ್ಟಿನಲ್ಲಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಿಂಧನೂರು ನಗರದ ರಾಯಚೂರು, ಕುಷ್ಟಗಿ ಹಾಗೂ ಗಂಗಾವತಿ ಮಾರ್ಗದ ರಸ್ತೆ ಸೇರಿದಂತೆ ಇನ್ನಿತರೆ ಸರ್ಕಾರಿ ಜಾಗಗಳಲ್ಲಿ ಸಣ್ಣಪುಟ್ಟ ಅಂಗಡಿಗಳನ್ನಿಟ್ಟುಕೊಂಡು ಹಲವು ವರ್ಷಗಳಿಂದ ಬೀದಿ ಬದಿ ವ್ಯಾಪಾರ ನಡೆಸುತ್ತಿದ್ದ ಸಾವಿರಾರು ವ್ಯಾಪಾರಸ್ಥರನ್ನು 2025 ಫೆಬ್ರವರಿ 04ರಂದು ಏಕಾಏಕಿ ತೆರವುಗೊಳಿಸಿದ್ದರಿಂದ ಅವರನ್ನು ಅವಲಂಬಿಸಿದ ಸಾವಿರಾರು ಕುಟುಂಬಗಳು ಕಂಗಾಲಾಗಿವೆ. ನಗರದಲ್ಲಿ ಸಾಮಾಜಿಕ–ಆರ್ಥಿಕ ಬಿಕ್ಕಟ್ಟು, ಅಷ್ಟು ಕುಟುಂಬಗಳ ಮೇಲೆ ಪರೋಕ್ಷವಾಗಿ ತುರ್ತು ಪರಿಸ್ಥಿತಿ ಹೇರಿದಂತಾಗಿದೆ.

ಬೀದಿ ಬದಿ ವ್ಯಾಪಾರ ಮಾಡಿ, ಅದರಿಂದ ಬಂದ ಅಲ್ಪಸ್ವಲ್ಪ ಆದಾಯದಿಂದ ಉಪ ಜೀವನ ನಡೆಸುತ್ತಿರುವ ಕುಟುಂಬಗಳು ತೆರವು ಕಾರ್ಯಾಚರಣೆಯಿಂದ ಉದ್ಯೋಗವನ್ನು ಕಳೆದುಕೊಂಡು, ಅಕ್ಷರಶಃ ಬೀದಿಗೆ ಬಿದ್ದಿವೆ. ನಗರದ ಪ್ರಮುಖ ರಸ್ತೆ ಬದಿಗಳಲ್ಲಿನ ಬೀದಿ ವ್ಯಾಪಾರಿಗಳು ಮುನಿಸಿಪಲ್, ಪಿಡಬ್ಲ್ಯುಡಿ, ಹೆದ್ದಾರಿ ಪ್ರಾಧಿಕಾರ ಹಾಗೂ ಪೊಲೀಸ್ ಅಧಿಕಾರಿಗಳಿಂದ ಕಿರುಕುಳದ ನಡುವೆಯೂ ಬಡವರಿಗೆ, ಮಧ್ಯಮ ವರ್ಗದವರಿಗೆ ಉತ್ತಮ ಸರಕು–ಸೇವೆಗಳನ್ನು ಒದಗಿಸುತ್ತಾ ಬಂದಿದ್ದರೂ,

☛4

## ಸಮೀಕ್ಷೆ ವೇಳೆ ಪರಿಶಿಷ್ಟ ಜಾತಿ–ಮಾದಿಗ ಎಂದು ನಿಖರವಾಗಿ ಬರೆಯಿಸಿ: ಯಲ್ಲಪ್ಪ ಬಾದರದಿನ್ನಿ

ಜನವಾದಿ ವಾರ್ತೆ




ಮಾನ್ವಿ ಏ 3– ಪಟ್ಟಣದ ಪತ್ರಿಕಾ ಭವನದಲ್ಲಿ ಮಾದಿಗ ಜಾಗೃತಿ ಯುವ ವೇದಿಕೆ ತಾಲೂಕು ಸಮಿತಿಯ ಯಲ್ಲಪ್ಪ ಬಾದರದಿನ್ನಿ ವಕೀಲರು ಮಾತನಾಡಿ 2024 ಆ1ರಂದು ಸುಪ್ರೀಂಕೋರ್ಟ ಒಳಮೀಸಲಾತಿ ಕುರಿತು ನೀಡಿದ ತೀರ್ಪಿನಂತೆ ದೇಶದಲ್ಲಿನ ರಾಜ್ಯ ಸರ್ಕಾರಗಳಿಗೆ ಪರಿಶಿಷ್ಠ ಜಾತಿಗಳಲ್ಲಿಒಳಮೀಸಲಾತಿ ಜಾರಿ ಮಾಡಲು ಪರಮಾಧಿಕಾರವನ್ನು ನೀಡಿದ್ದು ತೆಲಂಗಾಣ ಮತ್ತು ಆಂಧ್ರಪ್ರದೇಶದಲ್ಲಿನ ಸರ್ಕಾರಗಳು ಸದನದಲ್ಲಿ ಒಳಮೀಸಲಾತಿಯ ಕಾಯ್ದೆ ರೂಪದಲ್ಲಿ ತರುವುದಕ್ಕೆ ಅಂಗಿಕಾರಿಸಿವೆ ಕರ್ನಾಟಕ ರಾಜ್ಯದಲ್ಲಿ ಸದಾಶಿವ ಆಯೋಗ ಮತ್ತು ಕಾಂತರಾಜ ವರದಿ ಇದ್ದು ಮಾಧುಸ್ವಾಮಿ ಕಮಿಟಿ ವರದಿ ಇದ್ದರು ಕೂಡ ರಾಜ್ಯ ಸರ್ಕಾರ ನೂತನವಾಗಿ ರಚಿಸಿದ ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್ ನೇತೃತ್ವದ ಕಮಿಟಿ ಕೂಡ ಸರ್ಕಾರಕ್ಕೆ ಮಧ್ಯಂತರ ವರದಿಯನ್ನು ಸಲ್ಲಿಸಿದ್ದರು ಕೂಡ ರಾಜ್ಯದಲ್ಲಿ ಪರಿಶಿಷ್ಟ ಜಾತಿಯವರು ಆದಿ ಆಂದ್ರ,ಆದಿದ್ರಾವಿಡ,ಆದಿಕರ್ನಾಟಕ, ಎಸ್.ಸಿ. ಹರಿಜನ ಹೆಸರಿನಲ್ಲಿ ಜಾತಿ ಪ್ರಮಾಣ ಪತ್ರಗಳನ್ನು ಪಡೆದಿರುವುದ–ರಿಂದ ಜಾತಿ ಗೊಂದಾಲ ಮೂಡಿರುವ ಕಾರಣ ನಿಖರವಾದ ಮಾಹಿತಿಗಾಗಿ ರಾಜ್ಯ ಸರ್ಕಾರವು

☛4

# ಬಿಜೆಪಿ ಕಾಲದ ಬೆಲೆ ಏರಿಕೆ ಬಗ್ಗೆ ಏಕೆ ಪ್ರತಿಭಟನೆ ಮಾಡುತ್ತಿಲ್ಲ?: ಡಿ.ಕೆ.ಶಿವಕುಮಾರ್

ಬೆಂಗಳೂರು/ನವದೆಹಲಿ ಏ 3– "ಈ ಹಿಂದೆ ಪೆಟ್ರೋಲ್, ಡೀಸೆಲ್, ಗ್ಯಾಸ್ ಸಿಲಿಂಡರ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಹೆಚ್ಚಳವಾಗಿತ್ತು. ಈಗ ಟೋಲ್ ದರ ಏಕೆ ಹೆಚ್ಚಳವಾಗಿದೆ. ಇದರ ಬಗ್ಗೆ ಬಿಜೆಪಿಯವರು ಏತಕ್ಕಾಗಿ ಪ್ರತಿಭಟನೆ ಮಾಡುತ್ತಿಲ್ಲ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಕಿಡಿಕಾರಿದ್ದಾರೆ.




ನವದೆಹಲಿಯಲ್ಲಿಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬೆಲೆ ಏರಿಕೆ ಬಗ್ಗೆ ಬಿಜೆಪಿ ಧರಣಿ ಹಾಗೂ ರಸ್ತೆ ತಡೆ ಮಾಡುತ್ತಿರುವುದರ ಬಗ್ಗೆ ಕೇಳಿದಾಗ, "ನಾವು ಹಾಲಿನ ದರ ಹೆಚ್ಚಳ ಮಾಡಿರುವುದರಿಂದ ರೈತ–ರಿಗೆ ಹೆಚ್ಚು ಅನುಕೂಲವಾಗಲಿದೆ. ರೈತರ ಬದುಕನ್ನೂ ಸಹ ನಾವು ನೋಡಬೇಕಲ್ಲವೇ? ರೈತರ ಪಕ್ಷ ಎಂದು ಕೇವಲ ಹಸಿರು ಟವೆಲ್ ಹಾಕಿಕೊಂಡರೆ ಸಾಕೇ?. ಊರುಗಳಿಗೆ ನಾವುಗಳು ಹೋದಾಗ ರೈತರು ನಮ್ಮನ್ನು ಹೊಡೆಯಲು ಬಂದಿಲ್ಲ, ಅದೇ ನಮ್ಮ ಪುಣ್ಯ. ಅನೇಕ ರೈತರು ಹಸುಗಳನ್ನು ಮಾರಾಟ ಮಾಡಲು ಹೋಗುತ್ತಿದ್ದಾರೆ. ಈ ಹಿಂದೆ ಬೆಲೆ ಹೆಚ್ಚಳವಾದಾಗ ಅವರುಗಳೂ ಜನಪ್ರತಿನಿಧಿಗಳಾಗಿದ್ದರು ಅಲ್ಲವೇ?"– ಎಂದು ಕುಟುಕಿದರು.

ಪ್ರತಿಭಟನೆ ವಿಚಾರವಾಗಿ ಜೆಡಿಎಸ್ ಹಾಗೂ ಬಿಜೆಪಿ ಮಧ್ಯೆ ಒಡಕು ಮೂಡಿರುವ ಬಗ್ಗೆ ಕೇಳಿದಾಗ, "ಅವರ ಪಕ್ಷದ ವಿಚಾರ ನನಗೆ ಬೇಡ. ಅವರು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಇದರ ಬಗ್ಗೆ ಸುಮ್ಮನೆ ಚರ್ಚೆ ಏಕೆ? ಬಿಜೆಪಿಯವರ ಪ್ರತಿಭಟನೆಗೆ ನಾನು ಶುಭಕೋರುತ್ತೇನೆ. ಅವರು ಪಕ್ಷ ಉಳಿಸಿಕೊಳ್ಳಲು ರಾಜಕೀಯ ಮಾಡುತ್ತಿದ್ದಾರೆ ಮಾಡಲಿ" ಎಂದರು.

ಗ್ಯಾರ್ಂಟಿ ವೆಚ್ಚ ಹೊರೆಯಾಗುತ್ತಿರುವ ಕಾರಣಕ್ಕೆ ಬೆಲೆ ಹೆಚ್ಚಳ ಮಾಡುತ್ತಿದ್ದಾರೆ ಎನ್ನುವ ಪ್ರತಿಪಕ್ಷಗಳ ಟೀಕೆಯ ಬಗ್ಗೆ ಕೇಳಿದಾಗ, "ಅವರುಗಳು ಮಾತನಾಡಬೇಕಲ್ಲ ಎಂದು ಮಾತನಾಡುತ್ತಿದ್ದಾರೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮಲ್ಲಿ ಹಾಲಿನ ದರ ಕಡಿಮೆಯಿದೆ" ಎಂದು ಹೇಳಿದರು.

ರಾಷ್ಟ್ರೀಯ ನಾಯಕರನ್ನು ಭೇಟಿಯಾಗುವುದು ಸಾಮಾನ್ಯ: ಮುಖ್ಯಮಂತ್ರಿ ಅವರು ರಾಹುಲ್ ಗಾಂಧಿ ಅವರನ್ನು ಭೇಟಿಮಾಡಿದ್ದರ ಬಗ್ಗೆ ಕೇಳಿದಾಗ, "ರಾಹುಲ್ ಗಾಂಧಿ ಅವರು ಪಕ್ಷದ ರಾಷ್ಟ್ರೀಯ ನಾಯಕರು, ಅದಕ್ಕೆ ಭೇಟಿ ಮಾಡಿದ್ದಾರೆ. ನಾನು ಕೂಡ ಬಂದಾಗ ಭೇಟಿ ಮಾಡಿದ್ದೇನೆ. ಹಲವಾರು ನಾಯಕರನ್ನು ಭೇಟಿಯಾಗುತ್ತೇವೆ. ಕಾಂಗ್ರೆಸ್ ಕಚೇರಿ ಪಕ್ಷದ ದೇವಸ್ಥಾನವಿದ್ದಂತೆ ಭೇಟಿ ಮಾಡಿದರೆ ತಪ್ಪೇನಿದೆ?. ವಿಧಾನ ಪರಿಷತ್ ಸ್ಥಾನಗಳ ಬಗ್ಗೆ ಇನ್ನೂ ಚರ್ಚೆಯಾಗಿಲ್ಲ. ಚರ್ಚೆಗೆ ಬಂದಾಗ ಮಾತನಾಡುತ್ತೇವೆ" ಎಂದರು.

"ದೆಹಲಿಯ ನೂತನ ಕರ್ನಾಟಕ ಭವನ ನಮ್ಮ ರಾಜ್ಯದ ಜನತೆಯ ರಾಯಭಾರಿಯಾಗಿ ಕೆಲಸ ಮಾಡಲಿದೆ. ಅಂದರೆ ಎಲ್ಲ ಪಕ್ಷಗಳ ಜನಪ್ರತಿನಿಧಿಗಳಿಗೆ, ಸರ್ಕಾರದ ಅಧಿಕಾರಿಗಳಿಗೆ ಸೇ–ರಿದಂತೆ ಅನೇಕರಿಗೆ ಈ ಭವನ ಉಪಯೋಗವಾಗಲಿದೆ. ಇಲ್ಲಿ ನಡೆಯುವ ಚರ್ಚೆಗಳಿಂದ ರಾಜ್ಯಕ್ಕೆ ಉಪಯೋಗವಾಗಲಿ ಎಂದು ಆಶಿಸುತ್ತೇನೆ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಒಂದಷ್ಟು ಸಲಹೆ ಸೂಚನೆಗಳನ್ನು ನೀಡಿದ್ದಾರೆ. ಈ ಸೂಚನೆಗಳನ್ನು ಕಾರ್ಯಗತಗೊಳಿಸಲಾಗುವುದು, ಇದರ ಬಗ್ಗೆ ಮುಖ್ಯಮಂತ್ರಿಗಳು ಸಹ ಸಹಮತ ವ್ಯಕ್ತಪಡಿಸಿದ್ದಾರೆ" ಎಂದು ತಿಳಿಸಿದರು.

# ಸರ್ಕಾರದ ಬಳಿ ಅಭಿವೃದ್ಧಿಗೆ ಹಣ ಇಲ್ಲ, ಐದು ಗ್ಯಾರಂಟಿಗಾಗಿ ಮನೆ ಮನೆ ಲೂಟಿ: ಅಶೋಕ್

ಬೆಂಗಳೂರು ಏ 3– "ಕಾಂಗ್ರೆಸ್ ಪಕ್ಷ ಚುನಾವಣೆಗೆ ಮುನ್ನ ಬೆಲೆ ಏರಿಕೆ ಮಾಡಲ್ಲ, ಐದು ಗ್ಯಾರಂಟಿ ಕೊಡುತ್ತೇವೆ ಎಂದಿತ್ತು. ಆದರೆ, ಎರಡು ವರ್ಷಗಳಲ್ಲಿ ಹಾಲಿನ ದರ ಮೂರು ಬಾರಿ ಏರಿಕೆ ಮಾಡಲಾಗಿದೆ. ಸರ್ಕಾರದ ಬಳಿ ಅಭಿವೃದ್ಧಿಗೆ ಹಣ ಇಲ್ಲ. ಅದಕ್ಕಾಗಿ ಬೆಲೆ ಏರಿಕೆ ಮೂಲಕ ಲೂಟಿ ಮಾಡಲಾಗುತ್ತಿದೆ" ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ.



ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯುತ್ತಿರುವ ಅಹೋರಾತ್ರಿ ಧರಣಿಯಲ್ಲಿ ಭಾಗಿಯಾಗಿ ಇಂದು ಮಾತನಾಡಿದ ಅವರು, "ಬಜೆಟ್‌ನಲ್ಲಿ ಯಾವುದೇ ತೆರಿಗೆ ತೋರಿಸದೆ ಇದೀಗ ಬೆಲೆ ಏರಿಕೆ ಮಾಡಲಾಗ್ತಿದೆ. ಐದು ಗ್ಯಾರಂಟಿಗಾಗಿ ಕರ್ನಾಟಕದ ಮನೆ ಮನೆ ಲೂಟಿ ಆಗುತ್ತಿದೆ" ಎಂದರು.

"ಸಚಿವರು ಅಂಗಡಿ ತೆರೆದಿದ್ದಾರೆ. 40% ಆರೋಪಕ್ಕೆ ಸಾಕ್ಷಿ ಇಲ್ಲ. ಆದರೆ, ಕಾಂಗ್ರೆಸ್ ಸರ್ಕಾರ 60% ಕಮಿಷನ್ ಪಡೆದುಕೊಳ್ಳುತ್ತಿದೆ. ಸ್ಮಾರ್ಟ್ ಮೀಟರ್ ಹಗರಣ ನಡೆದಿದೆ. ಸಿದ್ದರಾಮಯ್ಯ ಹೆಸರಿಗಷ್ಟೇ ಸಿಎಂ. ಸರ್ಕಾರದ ಗಾಲಿ ಕುರ್ಚಿಯಲ್ಲಿದೆ" ಎಂದು ಹೇಳಿದರು.

"ಕಾಂಗ್ರೆಸ್ ಪಕ್ಷ ತನ್ನ ಓಲೈಕೆ ರಾಜಕಾರಣಕ್ಕಾಗಿ ವಕ್ಫ್ ಕಾಯ್ದೆಗೆ ತಿದ್ದುಪಡಿ ತಂದಿತ್ತು. ಯಾವ ಜಮೀನನ್ನು ಬೇಕಾದರೂ ವಕ್ಫ್ ಬೋರ್ಡ್ ಆಸ್ತಿ ಎಂದು ಘೋಷಣೆ ಮಾಡಿಕೊಳ್ಳುವ ಅವಕಾಶ ಕೊಟ್ಟಿತ್ತು. ಇದರಿಂದ ರೈತರ ಜಮೀನು, ದೇವಸ್ಥಾನ, ಮಠ–ಮಂದಿರಗಳ ಆಸ್ತಿ ಎಲ್ಲ ಕಬಳಿಕೆ ಆಗುತ್ತಿತ್ತು. ಈಗ ಎನ್‌ಡಿಎ ಸರ್ಕಾರ ತಂದಿರುವ ತಿದ್ದುಪಡಿಯಿಂದ ರೈತರು ನಿಟ್ಟುಸಿರು ಬಿಡುವಂತಾಗಿದೆ" ಎಂದರು.

ವಕ್ಫ್ ಬೋರ್ಡ್ ಹೆಸ–ರಿನಲ್ಲಿ ಕಾಂಗ್ರೆಸ್ ಮುಖಂಡರಿಂದ ಜಮೀನು ಲೂಟಿ–ವಿಜಯೇಂದ್ರ: ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಮಾತನಾಡಿ, "ಲೋಕಸಭೆಯಲ್ಲಿ ನಿನ್ನೆ ಒಂದು ಐತಿಹಾಸಿಕ ಮಸೂದೆಗೆ ಅಂಗೀಕಾರ ಲಭಿಸಿದೆ" ಎಂದು ಸಂತಸ ವ್ಯಕ್ತಪಡಿಸಿದರು.

ಮುಂದುವರೆದು ಮಾತನಾಡಿದ ಅವರು, "ಕಾಂಗ್ರೆಸ್ ಪಕ್ಷ ವಕ್ಫ್ ಕಾಯಿದೆಗೆ ತಿದ್ದುಪಡಿಯನ್ನು ವಿರೋಧಿಸುವುದು ದುರಂತ. ಕರ್ನಾಟಕದಲ್ಲಿ ಸಾವಿರಾರು ಕೋಟಿ ರೂ ಮೌಲ್ಯದ ಜಮೀನುಗಳನ್ನು ವಕ್ಫ್ ಬೋರ್ಡ್ ಹೆಸರಿನಲ್ಲಿ ಕಾಂಗ್ರೆಸ್ ಮುಖಂಡರು, ರಾಜಕಾರಣಿಗಳು ಲೂಟಿ ಮಾಡಿದ್ದಾರೆ. ಇಂಥವರು ಮಸೂದೆಯನ್ನು ವಿರೋಧಿಸುತ್ತಿದ್ದಾರೆ" ಎಂದು ಟೀಕಿಸಿದರು.

# ರಾಜ್ಯದಲ್ಲಿ ಮುಂದಿನ 6 ದಿನ ಮಳೆ ಹೇಗಿರಲಿದೆ? ಹೀಗಿದೆ ಹವಾಮಾನ ಇಲಾಖೆಯ ಮುನ್ಸೂಚನೆ

ಬೆಂಗಳೂರು ಏ 2– ರಾಜ್ಯದ ಹಲವೆಡೆ ಮುಂದಿನ 6 ದಿನಗಳ ಕಾಲ ಮಳೆ ಸುರಿಯಲಿದೆ ಎಂದು ರಾಜ್ಯ ಹವಾಮಾನ ಇಲಾಖೆ ಇಂದು ಮುನ್ಸೂಚನೆ ನೀಡಿದೆ. ಏಪ್ರಿಲ್ 4 ಅಂದರೆ ನಾಳೆಯಿಂದ 9ರವರೆಗೆ ಎಲ್ಲೆಲ್ಲಿ ಮಳೆಯಾಗಲಿದೆ ಎಂಬುದರ ಕುರಿತು ಇಲಾಖೆ ಮಾಹಿತಿ ಒದಗಿಸಿದೆ.



ಕರಾವಳಿಗೆ ಮಳೆ ಮುನ್ಸೂಚನೆ: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಾಳೆ ವ್ಯಾಪಕವಾಗಿ ಹಗುರದಿಂದ ಮಧ್ಯಮ/ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಕರಾವಳಿಯ ಉಳಿದೆರಡು ಜಿಲ್ಲೆಗಳಲ್ಲಿ ಹಲವೆಡೆ ಹಗುರದಿಂದ ಮಧ್ಯಮ/ಗುಡುಗು ಸಹಿತ ಮಳೆಯಾಗುವ ಸಂಭವವಿದೆ.

ಉತ್ತರ ಒಳನಾಡಿನ ಕೆಲವು ಜಿಲ್ಲೆಗಳ ಕೆಲವೆಡೆ ಹಗುರದಿಂದ ಮಧ್ಯಮ ಮಳೆ/ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ.

ಹಾಸನ, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಭಾರೀ ಪ್ರಮಾಣದಲ್ಲಿ ಗುಡುಗು ಸಹಿತ ವ್ಯಾಪಕವಾಗಿ ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆ ಇದೆ. ಬಳ್ಳಾರಿ, ಚಿತ್ರದುರ್ಗ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಹಗುರದಿಂದ ಮಧ್ಯಮ/ಗುಡುಗು ಸಹಿತ ಮಳೆಯಾಗುವ ನಿರೀಕ್ಷೆ ಇದೆ. ದಕ್ಷಿಣ ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಹಲವೆಡೆ ಹಗುರದಿಂದ ಮಧ್ಯಮ/ಗುಡುಗು ಸಹಿತ ಮಳೆಯಾಗಲಿದೆ.

ಏಪ್ರಿಲ್ 5ರಂದು ಎಲ್ಲೆಲ್ಲಿ ಮಳೆ?: ದಕ್ಷಿಣ ಕನ್ನಡ ಜಿಲ್ಲೆಯ ಹಲವೆಡೆ ಸಾಧಾರಣ/ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಗೋಚರಿಸಿದೆ. ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಹಲವೆಡೆ ಹಗುರದಿಂದ ಸಾಧಾರಣ/ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ.

ವಿಜಯಪುರ, ಕಲಬುರಗಿ, ಯಾದಗಿರಿ, ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಹಗುರದಿಂದ ಮಧ್ಯಮ/ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಒಣ ಹವೆ ಇರಲಿದೆ.

ಹಾಸನ, ಮೈಸೂರು, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಚದುರಿದಂತೆ ಮಧ್ಯಮ/ಗುಡುಗು ಸಹಿತ ಮಳೆಯಾಗಲಿದೆ.

ಏಪ್ರಿಲ್ 6ರಂದು ಮಳೆ ಮುನ್ಸೂಚನೆ ಹೀಗಿದೆ: ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಹಗುರದಿಂದ ಮಧ್ಯಮವಾಗಿ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಕನ್ನಡ ಜಿಲ್ಲೆಯಾದ್ಯಂತ ಒಣ ಹವೆ ಇರಲಿದೆ.

ಧಾರವಾಡ ಮತ್ತು ಬೆಳಗಾವಿ ಜಿಲ್ಲೆಗಳ ವಿವಿಧೆಡೆ ಹಗುರ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡಿನ ಉಳಿಡ ಜಿಲ್ಲೆಗಳಲ್ಲಿ ಒಣ ಹವೆಯ ಸಾಧ್ಯತೆಯಿದೆ.

ಹಾಸನ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಕೆಲವು ಕಡೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಮೈಸೂರು, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಗಳ ಕೆಲವು ಕಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಒಣ ಹವೆ ಇರಲಿದೆ ಎಂದು ಇಲಾಖೆ ಹೇಳಿದೆ.

**ಏಪ್ರಿಲ್ 7ರಂದು ಮಳೆ ಮುನ್ಸೂಚನೆ:** ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಅಲ್ಲಲ್ಲಿ ಹಗುರದಿಂದ ಮಧ್ಯಮವಾಗಿ ಮಳೆಯಾಗುವ ಸಾಧ್ಯತೆ ಇದೆ. ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಒಣ ಹವೆ ಇರಲಿದೆ.

ವಿಜಯಪುರ, ಕಲಬುರಗಿ, ಯಾದಗಿರಿ ಮತ್ತು ಬೀದರ್ ಜಿಲ್ಲೆಯ ಕೆಲವು ಸ್ಥಳಗಳಲ್ಲಿ ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಒಣ ಹವೆ ಇರುವ ಸಾಧ್ಯತೆಯಿದೆ

ಮೈಸೂರು, ಚಾಮರಾಜನಗರ, ರಾಮನಗರ, ತುಮಕೂರು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳ ಪ್ರತ್ಯೇಕ ಸ್ಥಳಗಳಲ್ಲಿ ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಒಣ ಹವೆ ಮುಂದುವರಿಯುವ ಸಾಧ್ಯತೆ ಇದೆ.

ಇನ್ನು ಏಪ್ರಿಲ್ 8, 9ರಂದು ರಾಜ್ಯದ ಎಲ್ಲಾ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಹಗುರದಿಂದ ಸಾಧಾರಣ/ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

# ಏಪ್ರೀಲ್ 05ರಂದು ಜಿಲ್ಲಾಡಳಿತದಿಂದ ಡಾ.ಬಾಬು ಜಗಜೀವನ ರಾಮ್ ಜಯಂತಿ

**ಜನವಾದಿ ವಾರ್ತೆ**

ರಾಯಚೂರು ಏ 03 – ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ರಾಯಚೂರು ವತಿಯಿಂದ ಏಪ್ರೀಲ್ 05ರ ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಭಾರತದ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ 118ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.


ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಸದಸ್ಯರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಎಲ್. ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಕೆ.ಕೆ.ಆರ್.ಡಿ.ಬಿ ಕಾರ್ಯದರ್ಶಿಗಳಾದ ಎಂ.ಸುಂದರೇಶ ಬಾಬು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ ಅವರು ಸೇ–ರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಮೈಸೂರು ವಿಶ್ವವಿದ್ಯಾಲಯದ ಡಾ.ಬಾಬು ಜಗಜೀವನ ರಾಮ್ ಅಧ್ಯಯನ ಕೇಂದ್ರದ ಸಂಶೋಧನಾ ಅಧಿಕಾರಿಗಳಾದ ಡಾ.ಶ್ರೀನಿವಾಸ ಮೂರ್ತಿ ಎಂ. ಅವರು ಡಾ.ಬಾಬು ಜಗಜೀವನ ರಾಮ್ ಅವರ ಕುರಿತು ಉಪನ್ಯಾಸ ನೀಡುವರು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಚಿದಾನಂದಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ರಾಮನವಮಿಯ ನಿಮಿತ್ತ ಸನಾತನ ಸಂಸ್ಥೆಯ ಲೇಖನ

*ಶ್ರೀರಾಮನವಮಿಯ ತಿಥಿ*

*ಚೈತ್ರ ಶುಕ್ಲ ನವಮಿ (6 ಏಪ್ರಿಲ್ 2025)*




ಶ್ರೀವಿಷ್ಣುವಿನ ಏಳನೆಯ ಅವತಾರನಾದ ಶ್ರೀರಾಮನ ಜನ್ಮ ಪ್ರೀತ್ಯರ್ಥವಾಗಿ ಶ್ರೀರಾಮ ನವಮಿಯನ್ನು ಆಚರಿಸುತ್ತಾರೆ. ಈ ದಿನ ಪುನರ್ವಸು ನಕ್ಷತ್ರದಲ್ಲಿ, ಮಧ್ಯಾಹ್ನದಲ್ಲಿ, ಕರ್ಕ ಲಗ್ನದಲ್ಲಿ ಸೂರ್ಯಾದಿ ಐದು ಗ್ರಹಗಳಿದ್ದಾಗ ಅಯೋಧ್ಯೆಯಲ್ಲಿ ಶ್ರೀರಾಮಚಂದ್ರನ ಜನ್ಮವಾಯಿತು.

*ಶ್ರೀರಾಮನವಮಿಯ ಆಧ್ಯಾತ್ಮಿಕ ಲಾಭವನ್ನು ಪಡೆಯಿರಿ*

ದೇವತೆಗಳು ಮತ್ತು ಅವತಾರಗಳ ಜನ್ಮತಿಥಿಯಂದು ಭೂಮಿಯ ಮೇಲೆ ಅವರ ತತ್ತ್ವವು ಹೆಚ್ಚು ಪ್ರಮಾಣದಲ್ಲಿ ಕಾರ್ಯನಿರತವಾಗಿರುತ್ತದೆ. ಶ್ರೀರಾಮ ನವಮಿಗೆ ಶ್ರೀರಾಮತತ್ತ್ವವು ಎಂದಿಗಿಂತ 1000 ಪಟ್ಟು ಹೆಚ್ಚು ಕಾರ್ಯನಿರತವಾಗಿರುತ್ತದೆ. ಶ್ರೀರಾಮ ನವಮಿಗೆ 'ಶ್ರೀರಾಮ ಜಯ ರಾಮ ಜಯ ಜಯ ರಾಮ।' ನಾಮಜಪ, ಹಾಗೆಯೇ ಶ್ರೀರಾಮನ ಇತರ ಉಪಾಸನೆಗಳನ್ನು ಭಾವಪೂರ್ಣವಾಗಿ ಮಾಡುವುದರಿಂದ ಶ್ರೀರಾಮತತ್ತ್ವದ ಲಾಭವನ್ನು ಆದಷ್ಟು ಹೆಚ್ಚು ಪಡೆಯಲು ಸಹಾಯವಾಗುತ್ತದೆ.

ಶ್ರೀರಾಮನವಮಿಯನ್ನು ಆಚರಿಸುವ ಪದ್ಧತಿ ಅನೇಕ ರಾಮ ಮಂದಿರಗಳಲ್ಲಿ ಚೈತ್ರ ಶುಕ್ಲ ಪ್ರತಿಪದೆಯಿಂದ ಒಂಭತ್ತು ದಿನಗಳ ಕಾಲ ಈ ಉತ್ಸವವು ನಡೆಯುತ್ತದೆ. ರಾಮಾಯಣದ ಪಾರಾಯಣ, ಹರಿಕಥೆ ಮತ್ತು ರಾಮನ ಮೂರ್ತಿಗೆ ವಿವಿಧ ಶೃಂಗಾರ ಮುಂತಾದವುಗಳೊಂದಿಗೆ ಈ ಉತ್ಸವವನ್ನು ಆಚರಿಸುತ್ತಾರೆ. ನವಮಿಯಂದು ಮಧ್ಯಾಹ್ನ ರಾಮಜನ್ಮದ ಕೀರ್ತನೆ (ಹರಿಕಥೆ) ಯಾಗುತ್ತದೆ. ಮಧ್ಯಾಹ್ನ ಕುಂಚಿಗೆ (ಮಗುವಿನ ತಲೆಗೆ ಕಟ್ಟುವ ಒಂದು ವಸ್ತ್ರ. ಈ ವಸ್ತ್ರವು ಬೆನ್ನಿನವರೆಗೆ ಇರುತ್ತದೆ.) ಹಾಕಿದ ತೆಂಗಿನಕಾಯಿಯನ್ನು ತೊಟ್ಟಿಲಿನಲ್ಲಿಟ್ಟು ತೂಗುತ್ತಾರೆ. ಭಕ್ತರು ಅದರ ಮೇಲೆ, ಗುಲಾಲು ಮತ್ತು ಹೂವುಗಳನ್ನು ಅರ್ಪಿಸುತ್ತಾರೆ.' (ಕೆಲವು ಕಡೆಗಳಲ್ಲಿ ತೆಂಗಿನ ಕಾಯಿಯ ಬದಲು ಶ್ರೀರಾಮನ ಮೂರ್ತಿಯನ್ನು ತೊಟ್ಟಿಲಿನಲ್ಲಿ ಇಡುತ್ತಾರೆ. ▯ ಸಂಕಲನಕಾರರು) ಈ ಸಂದರ್ಭದಲ್ಲಿ ಶ್ರೀರಾಮನ ಜನ್ಮದ ಗೀತೆಯನ್ನು ಹೇಳಲಾಗುತ್ತದೆ. ಅದರ ನಂತರ ಶ್ರೀರಾಮನ ಮೂರ್ತಿಯನ್ನು ಪೂಜಿಸುತ್ತಾರೆ ಮತ್ತು ಪ್ರಸಾದವೆಂದು ಶುಂಠಿಚೂರ್ಣವನ್ನು ಕೊಡುತ್ತಾರೆ. ಕೆಲವು ಕಡೆಗಳಲ್ಲಿ ಶುಂಠಿಚೂರ್ಣದೊಂದಿಗೆ ಮಹಾಪ್ರಸಾದವನ್ನೂ ನೀಡುತ್ತಾರೆ.

ಶ್ರೀರಾಮನವಮಿಯ ಮಹತ್ವ ತ್ರೇತಾಯುಗದಲ್ಲಿ ರಾಮನ ಜನ್ಮವಾದಾಗ ಕಾರ್ಯನಿರತವಾಗಿದ್ದ ಶ್ರೀವಿಷ್ಣುವಿನ ಸಂಕಲ್ಪ, ತ್ರೇತಾಯುಗದಲ್ಲಿನ ಅಯೋಧ್ಯಾವಾಸಿಗಳ ಭಕ್ತಿ ಭಾವ ಮತ್ತು ಪೃಥ್ವಿಯಲ್ಲಿನ ಸಾತ್ತ್ವಿಕ ವಾತಾವರಣದಿಂದಾಗಿ ಪ್ರಭು ಶ್ರೀರಾಮನ ಜನ್ಮದಿಂದ ಶೇ. 100 ರಷ್ಟು ಪರಿಣಾಮವಾಗಿತ್ತು. ಅನಂತರ ಪ್ರತಿವರ್ಷ ಬರುವಂತಹ ಚೈತ್ರ ಶುಕ್ಲ ನವಮಿಗೆ ಬ್ರಹ್ಮಾಂಡದಲ್ಲಿನ ವಾತಾವರಣದಲ್ಲಿ ರಾಮತತ್ತ್ವವು ಪ್ರಕ್ಷೇಪಿಸಿ ವಾತಾವರಣವನ್ನು ಸಾತ್ತ್ವಿಕ ಮತ್ತು ಚೈತನ್ಯಮಯವನ್ನಾಗಿಸಲು ವಿಷ್ಣುಲೋಕದಿಂದ ಶ್ರೀರಾಮತತ್ತ್ವಯುಕ್ತ ವಿಷ್ಣುತತ್ತ್ವವು ಭೂಲೋಕದ ದಿಕ್ಕಿನತ್ತ ಪ್ರಕ್ಷೇಪಿತವಾಗುತ್ತದೆ ಮತ್ತು ಆ ದಿನ ಶ್ರೀರಾಮನ ಅಂಶಾತ್ಮಕ ಜನ್ಮವಾಗುತ್ತದೆ. ಇದರ ಪರಿಣಾಮ ಇಡೀ ವರ್ಷವಿದ್ದು ಬ್ರಹ್ಮಾಂಡದಲ್ಲಿ ರಾಮ ತತ್ತ್ವಯುಕ್ತ ಸಾತ್ತ್ವಿಕತೆ ಮತ್ತು ಚೈತನ್ಯದ ಪ್ರಕ್ಷೇಪಣೆಯಾಗುತ್ತದೆ. ರಾಮ ತತ್ತ್ವಯುಕ್ತ ಸಾತ್ತ್ವಿಕತೆ ಮತ್ತು ಚೈತನ್ಯವನ್ನು ಬ್ರಹ್ಮಾಂಡದಲ್ಲಿನ ಪ್ರತಿಯೊಂದು ಸಜೀವ ಮತ್ತು ನಿರ್ಜೀವ ವಸ್ತುಗಳು ಗ್ರಹಿಸಿಕೊಳ್ಳುತ್ತವೆ ಮತ್ತು ಅದರಿಂದ ಅವುಗಳಿಗೆ ತಮ್ಮ ಕಾರ್ಯವನ್ನು ಒಳ್ಳೆಯ ರೀತಿಯಿಂದ ಮಾಡಲು ಸಾಧ್ಯವಾಗುತ್ತದೆ.

(ಹೆಚ್ಚಿನ ಮಾಹಿತಿಗಾಗಿ ಓದಿ ▯ ಸನಾತನ ಸಂಸ್ಥೆಯ ಗ್ರಂಥ 'ಹಬ್ಬ, ಧಾರ್ಮಿಕ ಉತ್ಸವ ಮತ್ತು ವ್ರತಗಳು')

*ಸಂಗ್ರಹ*
**ಶ್ರೀ. ವಿನೋದ ಕಾಮತ**
ಸನಾತನ ಸಂಸ್ಥೆ
*ಸಂಪರ್ಕ :* 9342599299

# ತೊಗರಿ ಖರೀದಿಸಲು ಮೇ.01ರವರೆಗೆ ಅವಧಿ ವಿಸ್ತರಣೆ

ರಾಯಚೂರು ಏ 03 – ಕೃಷಿ ಮಾರಾಟ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಉತ್ಪನ್ನವನ್ನು ಖರೀದಿಸಲು ಮೇ.01ರವರೆಗೆ ಅವಧಿ ವಿಸ್ತರಣೆ ಮಾಡಲಾಗಿದೆ ಎಂದು ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ.ಕೃಷ್ಣ ಅವರು ತಿಳಿಸಿದ್ದಾರೆ.

ಕೇಂದ್ರ ಸರಕಾರದ ಬೆಂಬಲ ಬೆಲೆ ಯೋಜನೆಯಡಿ 2024–25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ತೊಗರಿ ಖರೀದಿ ಪ್ರಕ್ರಿಯೆ ಜಿಲ್ಲೆಯಲ್ಲಿ ಈಗಾಗಲೇ ಚಾಲ್ತಿಯಲ್ಲಿದ್ದು, ರೈತರ ಹಿತದೃಷ್ಟಿಯಿಂದ ತೊಗರಿ ಖರೀದಿಗೆ ನೋಂದಣಿಯನ್ನು ಏಪ್ರಿಲ್–25ರವರೆಗೆ ಮತ್ತು ಭೌತಿಕ ತೊಗರಿ ಖರೀದಿಗೆ ಮೇ–1ರವರೆಗೆ ವಿಸ್ತರಣೆ ಮಾಡಿ ಸರಕಾರ ಆದೇಶ ಹೊರಡಿಸಿದೆ.

ಕೇಂದ್ರ ಸರಕಾರವು ಬೆಂಬಲ ಬೆಲೆ ಯೋಜನೆಯಡಿ ತೊಗ–ರಿಗೆ ಪ್ರತೀ ಕ್ವಿಂಟಾಲ್ 7,550 ರೂ. ನಿಗದಿಪಡಿಸಿದ್ದು, ಇದಕ್ಕೆ ರಾಜ್ಯ ಸರಕಾರದಿಂದ ಪ್ರೋತ್ಸಾಹಧನ 450ರೂ. ಪ್ರತೀ ಕ್ವಿಂಟಾಲ್ ಗೆ 8,000 ರೂ. ದರ ನಿಗದಿಪಡಿಸಿದೆ. ಪ್ರತೀ ಎಕರೆಗೆ 4 ಕ್ವಿಂಟಾಲ್ ಮತ್ತು ಪ್ರತೀ ರೈತರಿಂದ ಗರಿಷ್ಠ 40 ಕ್ವಿಂಟಾಲ್‌ಎಫ್.ಎ.ಕ್ಯೂ ಗುಣಮಟ್ಟದ ತೊಗರಿಯನ್ನು ಖರೀದಿಸಲಾಗುತ್ತಿದೆ.

ತೊಗರಿಯನ್ನು ಖರೀದಿಸಲು ನಾಫೆಡ್ ಹಾಗೂ ಎನ್.ಸಿ.ಸಿ.ಎಫ್ ಸಂಸ್ಥೆಗಳನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯನ್ನಾಗಿ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ, ನಿಯಮಿತ ಬೆಂಗಳೂರು ಸಂಸ್ಥೆಯನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ಗುರುತಿಸಲಾಗಿದೆ.

ಜಿಲ್ಲೆಯಲ್ಲಿ ಒಟ್ಟು 65 ಖರೀದಿ ಕೇಂದ್ರಗಳನ್ನು ತೆರೆದು ರೈತರಿಂದ ತೊಗರಿ ಖರೀದಿ ಮಾಡಲಾಗುತ್ತಿದೆ. ಜಿಲ್ಲೆಯ ರೈತ ಭಾಂದವರು ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಮಾರಾಟಕ್ಕಾಗಿ ತಮ್ಮ ಸಮೀಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಅಥವಾ ರೈತ ಉತ್ಪಾದಕ ಸಂಘಗಳಿಗೆ ಭೇಟಿ ನೀಡಿ ಹೆಸರು ನೊಂದಾಯಿಸಿಕೊಂಡು ತೊಗರಿ ಉತ್ಪನ್ನವನ್ನು ಮಾರಾಟ ಮಾಡಬೇಕೆಂದು ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ.ಕೃಷ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಮಾನ್ಯ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಲಿಂಗಸಗೂರು ರವರಲ್ಲಿ**

ಅಪರಾಧಿಕ ಸಂಕೀರ್ಣ ಸಂಖ್ಯೆ : 2961/2024

1) ಹುಲ್ಲಪ್ಪ ತಂದೆ ಬಸಪ್ಪ ವಯಸ್ಸು: 56 ವ
2) ಮಹಾದೇವಿ ಗಂಡ ಹನುಮಂತ ವಯಸ್ಸು: 45 ವ
ಸಾ: ತೋಂಡಿಹಾಳ ತಾ: ಲಿಂಗಸುಗೂರು
ಜಿ: ರಾಯಚೂರು

.......... ಅರ್ಜಿದಾರರು.

// ವಿರುದ್ಧ //

ಮಾನ್ಯ ಮುಖ್ಯಾಧಿಕಾರಿಗಳು
ಜನನ ಮತ್ತು ಮರಣ ನೋಂದಣಾಧಿಕಾರಿಗಳು,
ತಹಶೀಲ್ ಕಾರ್ಯಾಯಲಯ, ಲಿಂಗಸುಗೂರು
ತಾ: ಲಿಂಗಸುಗೂರು ಜಿ: ರಾಯಚೂರು
ಸಂಬಂಧಪಟ್ಟವರಿಗೆಲ್ಲರಿಗೂ.

...... ಎದುರುದಾರರು.

ಬೇಡಿಕೆ: ಅರ್ಜಿದಾರ ನಂ:1 ರವರ ತಂದೆ ಗ್ಯಾನಪ್ಪ ರವರು ಮರಣ ಹೊಂದಿದ ಬಗ್ಗೆ ಮರಣ ಪತ್ರ ಪಡೆಯುವ ಸಲುವಾಗಿ ಅರ್ಜಿ.

**ಪತ್ರಿಕಾ ಪ್ರಕಟಣೆ**

ಈ ಮೇಲ್ಕಾಣಿಸಿದ ಅರ್ಜಿದಾರ ನಂ: 1 ರವರ ಮಾವನಾದ ಬಸಪ್ಪ ತಂದೆ ಗ್ಯಾನಪ್ಪ ಈತನು ದಿನಂಕ: 09-11-2013 ರಂದು ಲಿಂಗಸಗೂರು ತಾಲೂಕಿನ ತೊಂಡಿಹಾಳ ಗ್ರಾಮದ ತಮ್ಮ ಸ್ವ ಗೃಹದಲ್ಲಿ ಮೃತ ಹೊಂದಿದ್ದಾನೆಂದು ಸದರಿ ಮೃತನ ಮರಣ ಸಮರ್ಥನಾ ಪತ್ರವು ಅರ್ಜಿದಾರರಿಗೆ ಸ್ಥಿರಾಸ್ತಿ ವರ್ಗಾವಣೆ ಮಾಡುವ ಸಲುವಾಗಿ ಹಾಗೂ ಸರ್ಕಾರದ ಸೌಲಭ್ಯ ಪಡೆಯುವ ಸಲುವಾಗಿ ಅವಶ್ಯಕತೆ ಇರುವುದರಿಂದ ಆ ಕಾರಣಕ್ಕಾಗಿ ಅರ್ಜಿದಾರ ನಂ:1 ಮತ್ತು 2 ರವರನ್ನು ಹೊರತು ಪಡಿಸಿ ಬೇರೆ ಯಾರು ನೇರವಾರಸುದಾರರು ಇರುವುದಿಲ್ಲ. ಅರ್ಜಿದಾರ ನಂ: 1 ರವರ ತಂದೆ 2 ರವರ ಮಾವನವರ ಮರಣ ಸಮರ್ಥನಾ ಪ್ರಮಾಣ ಪತ್ರವನ್ನು ಪಡೆಯಲು ಅರ್ಜಿಯನ್ನು ಸಲ್ಲಸಿರುತ್ತಾರೆ.

ಕಾರಣ ಸದರಿ ಮೇಲಿನ ಅರ್ಜಿಗೆ ಸಂಬಂಧಿಸಿದಂತೆ ಯಾವುದಾದರು ಆಕ್ಷೇಪಣೆ ಅಥವಾ ಪ್ರತ್ಯುತ್ತರವನ್ನು ಸಲ್ಲಿಸಲು ಯಾರಾದರೂ ಇದ್ದಲ್ಲಿ ದಿನಾಂಕ: 05-05-2025 ರಂದು ಮಾನ್ಯ ನ್ಯಾಯಾಲಯಕ್ಕೆ ಸ್ವತಃ ಅಥವಾ ತಮ್ಮ ನ್ಯಾಯವಾದಿಗಳ ಮೂಲಕ ಹಾಜರಾಗಿ ಮೇಲಿನ ಅರ್ಜಿಗೆ ಸಂಬಂಧಿಸಿದಂತೆ ಉತ್ತರಿಸಲು ಅವಕಾಶ ನೀಡುತ್ತಿದ್ದು ಅದಕ್ಕೆ ತಪ್ಪಿದಲ್ಲಿ ಅರ್ಜಿಯನ್ನು ಕಾನೂನು ರೀತ್ಯಾ ಮುನ್ನಡೆಸಲಾಗುವುದು.

ಇಂದು ದಿನಾಂಕ: 03-04-2025ರ ನ್ಯಾಯಾಲಯದ ಆದೇಶದಂತೆ.

ಮುಖಾಂತರ:
ಸಹಿ/–
ಸಂಗನಬಸಪ್ಪ ಸಿ ಪಟ್ಟಣಶೆಟ್ಟಿ
ಅರ್ಜಿದಾರರ ಪರ ವಕೀಲರು

// ನ್ಯಾಯಾಲಯದ ಆದೇಶದಂತೆ//
ಸಹಿ/–
ಮುಖ್ಯ ಆಡಳಿತಾಧಿಕಾರಿಗಳು
ಪ್ರ. ದ. ನ್ಯಾಯಿಕ ದಂಡಾಧಿಕಾರಿಗಳ
ನ್ಯಾಯಾಲಯ, ಲಿಂಸಗಸಗೂರು

# ರಾಜ್ಯ ಸರ್ಕಾರಗಳು ತಮ್ಮ ಆದಾಯ ಹೆಚ್ಚಿಸಿಕೊಳ್ಳಲು ತೆರಿಗೆ ಏರಿಸುವುದು ಅನಿವಾರ್ಯ: ಪರಮೇಶ್ವರ್




ಬೆಂಗಳೂರು ಏ 3– "ಬೆಲೆ ಏರಿಕೆ ಕೇಂದ್ರ ಸರ್ಕಾರದ ನೀತಿಗಳಿಂದ ಆಗುತ್ತದೆ. ತೆರಿಗೆ ವಿಚಾರದಲ್ಲಿ ಕೇಂದ್ರವೇ ಹೆಚ್ಚು ನಿಯಂತ್ರಣ ಹೊಂದಿದೆ" ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.

ಸದಾಶಿವನಗರದ ತಮ್ಮ ನಿವಾಸದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, "ರಾಜ್ಯ ಸರ್ಕಾರಗಳು ತಮ್ಮ ಆದಾಯ ಹೆಚ್ಚಿಸಿಕೊಳ್ಳಲು ತೆರಿಗೆ ಏರಿಕೆ ಮಾಡುತ್ತವೆ. ಡೀಸೆಲ್ ಮತ್ತು ಪೆಟ್ರೋಲ್ ಬೆಲೆ 2 ರೂಗೆ ಏರಿಕೆ ಸ್ವಾಭಾವಿಕ. ಕೇಂದ್ರ ಸರ್ಕಾರ ತೆರಿಗೆ ನಿಯಂತ್ರಿಸಿದರೆ ರಾಜ್ಯಗಳಿಗೆ ಅನುಕೂಲವಾಗುತ್ತದೆ" ಎಂದರು.

ವಕ್ಫ್ ತಿದ್ದುಪಡಿ ಮಸೂದೆ ವಿಚಾರ: "ಲೋಕಸಭೆಯಲ್ಲಿ ವಕ್ಫ್ ಮಸೂದೆಗೆ ಸಾಕಷ್ಟು ವಿರೋಧ ವ್ಯಕ್ತವಾದರೂ, 288 ಜನ ಸದಸ್ಯರು ಇದರ ಪರವಾಗಿ ಮತ ಚಲಾಯಿಸಿದ್ದಾರೆ. ಈ ಕಾರಣದಿಂದಾಗಿ, ರಾತ್ರಿ ಒಂದು ಗಂಟೆಗೆ ಮಸೂದೆಯು ಅಂಗೀಕಾರಗೊಂಡಿದೆ. ಆದರೆ, ಈ ನಿರ್ಧಾರಕ್ಕೆ ಬಹಳಷ್ಟು ಜನರಿಂದ ವಿರೋಧವಿದ್ದು, ಮುಖ್ಯವಾಗಿ ಮುಸಲ್ಮಾನ ಸಮುದಾಯ ಮತ್ತು ಇತರರು ಇದನ್ನು ರಾಜಕೀಯವಾಗಿ ಉಪಯೋಗಿಸುತ್ತಿದ್ದಾರೆ ಎಂಬ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸದ್ಯ ವಿಧೇಯಕ ಪಾಸ್ ಆಗಿದೆ. ಆದರೆ ಮುಂದೆ ಏನಾಗುತ್ತದೆ ಎಂಬುದನ್ನು ಕಾದು ನೋಡೋಣ" ಎಂದು ಹೇಳಿದರು.ರಾಜ್ಯದ ಸಚಿವರು ಮತ್ತು ಶಾಸಕರು ರಾಹುಲ್ ಗಾಂಧಿಯವರನ್ನು ಭೇಟಿಯಾಗುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ, "ಅವರು ಬೇರೆ ವಿಚಾರಕ್ಕಾಗಿ ಹೋಗಿದ್ದಾರೆ. ರಾಜ್ಯ ರಾಜಕಾರಣದ ಬಗ್ಗೆ ಯಾವುದೇ ಚರ್ಚೆ ಆಗುವುದಿಲ್ಲ. ಇದು ಕೇವಲ ಸೃಷ್ಟಿ ಮಾತ್ರ" ಎಂದು ತಿಳಿಸಿದರು.

ಬಿಜೆಪಿ ಶಾಸಕರ ಅಮಾನತು ಸ್ಪೀಕರ್‌ಗೆ ಬಿಟ್ಟ ವಿಚಾರ: ವಿಧಾನಸಭೆಯಿಂದ 18 ಬಿಜೆಪಿ ಶಾಸಕರ ಅಮಾನತು ಕುರಿತ ಪ್ರಶ್ನೆಗೆ, "ಇದು ಸಭಾಧ್ಯಕ್ಷರಿಗೆ ಬಿಟ್ಟ ವಿಷಯವಾಗಿದ್ದು, ಇದರಲ್ಲಿ ಸರ್ಕಾರದ ಪಾತ್ರ ಇಲ್ಲ" ಎಂದರು.

"ಸ್ಪೀಕರ್ ಆಯ್ಕೆಯಲ್ಲಿ ಎಲ್ಲರೂ ಒಮ್ಮತದಿಂದ ಭಾಗಿಯಾಗಿದ್ದು, ಬಿಜೆಪಿಯವರು ಸಹ ಇದನ್ನು ಬೆಂಬಲಿಸಿದ್ದರು. ಆದರೆ, ಸಭಾಧ್ಯಕ್ಷರ ಪೀಠದ ಬಳಿ ನಡೆದ ಗಲಾಟೆಯ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಸ್ಪೀಕರ್ ಎಷ್ಟೇ ಪರಿಪರಿಯಾಗಿ ಕೇಳಿಕೊಂಡರೂ, ಬಿಜೆಪಿಯವರು ಅವರ ಮಾತಿಗೆ ಗೌರವ ಕೊಡದ ಕಾರಣ ಈ ಕ್ರಮ ಕೈಗೊಳ್ಳಲಾಗಿದೆ" ಎಂದು ತಿಳಿಸಿದರು.

ಕರ್ನಾಟಕ ಭವನದ ಉದ್ಘಾಟನೆಗೆ ತೆರಳದ ಬಗ್ಗೆ ಮಾತನಾಡಿ, "ಡಿಸಿಎಂ ಆಗಿದ್ದಾಗ ನಾನೇ ಅಡಿಗಲ್ಲು ಹಾಕಿದ್ದೆ. ಆದರೆ, ಯಾವ ಕಾರಣಕ್ಕೆ ನನ್ನನ್ನು ಆಹ್ವಾನಿಸಲಿಲ್ಲ ಎಂಬುದು ಗೊತ್ತಿಲ್ಲ. ಆಹ್ವಾನ ಇಲ್ಲದ ಕಾರಣ ದೆಹಲಿಗೆ ಹೋಗಲಿಲ್ಲ. ಸಿಎಂ, ಡಿಸಿಎಂ, ಎಲ್ಲ ಮಂತ್ರಿಗಳು ಇದ್ದಾರೆ. ನಾನು ಹೋಗುವ ಅಗತ್ಯವಿಲ್ಲ ಎಂದು ತೀರ್ಮಾನಿಸಿದೆ. ಇನ್ನು ಸಿದ್ದಗಂಗಾ ಮಠಕ್ಕೆ ಭೇಟಿ ವಿಚಾರದಲ್ಲಿ ನಮ್ಮ ತಂದೆಯವರಿಗೆ ಸ್ವಾಮೀಜಿಯವರೊಂದಿಗೆ ಆತ್ಮೀಯ ಸಂಬಂಧವಿತ್ತು. ಬೇರೆ ಕೆಲಸದಿಂದ ಹೋಗಲಾಗಲಿಲ್ಲ. ಆದರೆ, ಯಾವಾಗ ಬೇಕಾದರೂ ಮಠಕ್ಕೆ ಭೇಟಿ ನೀಡುತ್ತೇನೆ" ಎಂದು ಹೇಳಿದರು.

ಸಚಿವ ಕೆ.ಎನ್.ರಾಜಣ್ಣ ಹಾಗೂ ಅವರ ಪುತ್ರ ರಾಜೇಂದ್ರ ಅವರ ಹನಿಟ್ರ್ಯಾಪ್ ಆರೋಪ ಪ್ರಕರಣದಲ್ಲಿ ಯೂ–ಟರ್ನ್ ಕುರಿತು ಪರಮೇಶ್ವರ್ ಪ್ರತಿಕ್ರಿಯಿಸಿದ್ದು, "ತನಿಖೆ ನಡೆಯುತ್ತಿದೆ. ಇದರ ಮಧ್ಯೆ ಪ್ರತಿಕ್ರಿಯೆ ನೀಡುವುದು ಸರಿಯಲ್ಲ. ತನಿಖೆಯ ಒಳಗಿನ ಮಾಹಿತಿ ನಮಗೆ ಗೊತ್ತಿಲ್ಲ. ರಾಜಣ್ಣ ಅವರು ಸದನದಲ್ಲಿ ಇರುವ ರೀತಿ ಬೀದಿಯಲ್ಲಿ ಇರುವುದು ಕಷ್ಟ" ಎಂದರು.

ನಾಗಮೋಹನ್ ದಾಸ್ ಅವರ 40% ಕಮಿಷನ್‌ಗೆ ಸಾಕ್ಷಿಗಳಿಲ್ಲ ಎಂಬ ವರದಿಗೆ, "ಅವರು ತಮಗೆ ಸಿಕ್ಕ ಸಾಕ್ಷಿಗಳ ಆಧಾರದಲ್ಲಿ ವರದಿ ಮಾಡಿದ್ದಾರೆ. ಚುನಾವಣೆಯಲ್ಲಿ ನಾವು ಇದನ್ನು ಪ್ರಮುಖವಾಗಿ ಎತ್ತಿದ್ದೆವು. ಹೆಚ್ಚಿನ ಸಾಕ್ಷಿ ಸಿಕ್ಕರೆ ಅಂತಿಮ ವರದಿ ಸಲ್ಲಿಸಬಹುದು. ಇದು ಕೇವಲ ಮಧ್ಯಂತರ ವರದಿ" ಎಂದರು.

ಇದೇ ವೇಳೆ ಮುಡಾ ಪ್ರಕರಣದಲ್ಲಿ ಇ.ಡಿ. ತನಿಖೆ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, "ಕೋರ್ಟ್ ಅನುಮತಿ ಕೊಟ್ಟಿದ್ದರೆ ತನಿಖೆ ಮಾಡುತ್ತಾರೆ. ತನಿಖೆ ಮಾಡಲೇಬೇಕು" ಎಂದರು.

# 'ಬೈಕ್ ಟ್ಯಾಕ್ಸಿ ಸೇವೆ ನಿಷೇಧಿಸಿದ ಹೈಕೋರ್ಟ್: ವಾಹನ ಸವಾರರಿಗೆ ಎದುರಾಯ್ತು ಸಂಕಷ್ಟ



ಬೆಂಗಳೂರು ಏ 3– ರಾಪಿಡೊ, ಉಬರ್, ಓಲಾ ಮುಂತಾದ ಬೈಕ್ ಟ್ಯಾಕ್ಸಿ ಸೇವೆಗಳನ್ನು ತಕ್ಷಣವೇ ನಿಲ್ಲಿಸುವಂತೆ ಕರ್ನಾಟಕ ಹೈಕೋರ್ಟ್ ಆದೇಶಿಸಿದೆ. ಬೈಕ್ ಟ್ಯಾಕ್ಸಿಗಳಿಗೆ ಸ್ಪಷ್ಟ ನಿಯಮಗಳನ್ನು ರಚಿಸಲು ನ್ಯಾಯಾಲಯ ರಾಜ್ಯ ಸರ್ಕಾರಕ್ಕೆ ಮೂರು ತಿಂಗಳ ಕಾಲಾವಕಾಶ ನೀಡಿದೆ.

ಬೈಕ್ ಟ್ಯಾಕ್ಸಿ ಸೇವೆ ಮುಂದುವ–ರಿಸಲು ಸರ್ಕಾರಕ್ಕೆ ನಿರ್ದೇಶನ ಕೋರಿ ಉಬರ್ ಇಂಡಿಯಾ ಸಿಸ್ಟಮ್ಸ್ ಪ್ರೈವೇಟ್ ಲಿಮಿಟೆಡ್, ರೋಪ್ಪೆನ್ ಟ್ರಾನ್ಸ್‌ಪೋರ್ಟೇಶನ್ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್ ಮತ್ತು ಎಎನ್‌ಐ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಸಲ್ಲಿಸಿದ್ದ ಅರ್ಜಿಗಳನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ಎಂ.ಶ್ಯಾಮಪ್ರಸಾದ್ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

ಮೋಟಾರು ವಾಹನ ಕಾಯ್ದೆ, 1988ರ ಅಡಿಯಲ್ಲಿ ಸರಿಯಾದ ಮಾರ್ಗಸೂಚಿಗಳನ್ನು ಹೊರಡಿಸುವವರೆಗೆ ದ್ವಿಚಕ್ರ ವಾಹನಗಳನ್ನು ಸಾರಿಗೆ ವಾಹನಗಳಾಗಿ ಬಳಸುವಂತಿಲ್ಲ ಎಂದು ಆದೇಶದಲ್ಲಿ ತಿಳಿಸಿದೆ.

ಸಾರಿಗೆ ಇಲಾಖೆಯು ಮೋಟಾರ್ ಸೈಕಲ್‌ಗಳನ್ನು ಸಾರಿಗೆ ವಾಹನಗಳಾಗಿ ನೋಂದಾಯಿಸಲು ಅಥವಾ ಸರಿಯಾದ ನಿಯಮಗಳಿಲ್ಲದೆ ಪರವಾನಗಿಗಳನ್ನು ನೀಡಲು ಸಾಧ್ಯವಿಲ್ಲ ಎಂದು ಹೇಳಿದೆ.

ನಿರ್ದಿಷ್ಟ ಸಮಯದೊಳಗೆ ಮಾರ್ಗಸೂಚಿ : ಈ ಬಗ್ಗೆ ಕರ್ನಾಟಕ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಮಾತನಾಡಿ, "ಸರ್ಕಾರವು ನ್ಯಾಯಾಲಯದ ಆದೇಶವನ್ನು ಪಾಲಿಸುತ್ತದೆ. ನಾವು ನಿಯಮವನ್ನು ಪರಿಶೀಲಿಸುತ್ತೇವೆ ಮತ್ತು ನಿರ್ದಿಷ್ಟ ಸಮಯದೊಳಗೆ ಮಾರ್ಗಸೂಚಿಗಳನ್ನು ರೂಪಿಸುತ್ತೇವೆ" ಎಂದು ಹೇಳಿದ್ದಾರೆ.

"ನಮ್ಮ ಸವಾರರ ಜೀವನೋಪಾಯದ ಬಗ್ಗೆ ನಾವು ಚಿಂತಿತರಾಗಿದ್ದೇವೆ. ವಿವರವಾದ ಆದೇಶವನ್ನು ಓದಿದ ನಂತರ ನಾವು ಕಾನೂನು ಆಯ್ಕೆಗಳನ್ನು ಪರಿಗಣಿಸುತ್ತೇವೆ" ಎಂದು ರಾಪಿಡೋ ವಕ್ತಾರರು ತಿಳಿಸಿದ್ದಾರೆ.

300ಕ್ಕೂ ಹೆಚ್ಚು ಬೈಕ್‌ಗಳು ವಶಕ್ಕೆ: ಖಾಸಗಿ ದ್ವಿಚಕ್ರ ವಾಹನಗಳನ್ನು (ಬಿಳಿ ನಂಬರ್ ಪ್ಲೇಟ್ ಹೊಂದಿರುವ) ವಾಣಿಜ್ಯ ಉದ್ದೇಶಗಳಿಗೆ ಬಳಸುವಂತಿಲ್ಲ ಎಂದು ರಾಜ್ಯ ಸರ್ಕಾರ ಬಹಳ ಹಿಂದಿನಿಂದಲೂ ವಾದಿಸುತ್ತಿದೆ. ಆಟೋ ಚಾಲಕರ ಪ್ರತಿಭಟನೆಯ ನಂತರ ಅಧಿಕಾರಿಗಳು 2019 ಮತ್ತು 2022 ರ ನಡುವೆ 300 ಕ್ಕೂ ಹೆಚ್ಚು ಬೈಕ್‌ಗಳನ್ನು ವಶಪಡಿಸಿಕೊಂಡಿದ್ದರು.

2021ರಲ್ಲಿ ಕರ್ನಾಟಕವು ಹಸಿರು ಸಾರಿಗೆಯನ್ನು ಉತ್ತೇಜಿಸಲು ಎಲೆಕ್ಟ್ರಿಕ್ ಬೈಕ್ ಟ್ಯಾಕ್ಸಿ ಯೋಜನೆಯನ್ನು ಪರಿಚಯಿಸಿತು. ಆದಾಗ್ಯೂ, ಸುರಕ್ಷತೆಯ ಕಾಳಜಿ ಮತ್ತು ದುರುಪಯೋಗವನ್ನು ಉಲ್ಲೇಖಿಸಿ ಸರ್ಕಾರವು ಮಾರ್ಚ್ 2024 ರಲ್ಲಿ ಯೋಜನೆಯನ್ನು ಹಿಂತೆಗೆದುಕೊಂಡಿತು.

# ನೆನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳ ಅನುಮತಿಗೆ ಸಿಎಂ ಮನವಿ



ನವದೆಹಲಿ ಏ 3– ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಯಲ್ಲಿಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್‌ರವರನ್ನು ಭೇಟಿ ಮಾಡಿ ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳಿಗೆ ಅನುಮತಿ ನೀಡುವಂತೆ ಮನವಿ ಮಾಡಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನವದೆಹಲಿಯ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರೊಂದಿಗೆ ಕೇಂದ್ರ ಸಚಿವರನ್ನು ಸಿದ್ದರಾಮಯ್ಯ ಭೇಟಿ ಮಾಡಿದರು. ಈ ವೇಳೆ ರೈಲ್ವೆ ಹಾಗೂ ಕೇಂದ್ರ ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಉಪಸ್ಥಿತರಿದ್ದರು.ಕರ್ನಾಟಕ ರಾಜಸ್ಥಾನ ಬಳಿಕ ಅತಿ ಹೆಚ್ಚು ಮರುಭೂಮಿಯನ್ನು ಹೊಂದಿದೆ.

ಕೃಷಿ, ಭೂ ಬಳಕೆ, ಆಹಾರೋತ್ಪಾದನೆ, ನೀರಿನ ನಿರ್ವಹಣೆ, ನಾವಿನ್ಯ ತಂತ್ರಜ್ಞಾನ ಅಳವಡಿಕೆ, ಹವಾಮಾನ ಬದಲಾವಣೆಯ ಸವಾಲುಗಳ ನಿರ್ವಹಣೆ, ಸಾಮಾಜಿ–ಕ–ಆರ್ಥಿಕ ಬೆಳವಣಿಗೆಗಳಲ್ಲಿ ಮುಂಚೂಣಿಯಲ್ಲಿದೆ. ಕರ್ನಾಟಕಕ್ಕೆ ಅಗತ್ಯವಾದ ನೀರಿನ ಸರಬರಾಜಿಗೆ ಆದ್ಯತೆ ನೀಡಬೇಕಿದೆ. ಕರ್ನಾಟಕ ಸರ್ಕಾರ ಈಗಾಗಲೇ ರವಾನಿಸಿರುವ ಪ್ರಸ್ತಾವನೆಗಳ ಪೈಕಿ ಮೇಕೆದಾಟು, ಭದ್ರಾ ಮೇಲ್ದಂಡೆ ಯೋಜನೆಗಳು ಬಾಕಿ ಉಳಿದಿವೆ. ಕೇಂದ್ರ ಸಚಿವರು ಮಧ್ಯಪ್ರವೇಶಿಸಿ ಇವುಗಳಿಗೆ ಅನುಮೋದನೆ ಕೊಡಿಸಬೇಕಾಗಿ ಮನವಿ ಮಾಡಿದ್ದಾರೆ.

ಪ್ರಮುಖವಾಗಿ ಮೇಕೆದಾಟು ಯೋಜನೆಯ ಬಗ್ಗೆ ಪ್ರಸ್ತಾಪಿಸಿರುವ ಮುಖ್ಯಮಂತ್ರಿಗಳು ಯೋಜನೆಯ ಆರಂಭದಿಂದ ಇತ್ತೀಚಿನವರೆಗಿನ ಬೆಳವಣಿಗೆಗಳ ಸಮಗ್ರ ಮಾಹಿತಿ ನೀಡಿದ್ದಾರೆ. ಕುಡಿಯುವ ನೀರು ಹಾಗೂ ವಿದ್ಯುತ್ ಉತ್ಪಾದನೆ ಈ ಯೋಜನೆಯಿಂದ ಕರ್ನಾಟಕ ಹಾಗೂ ತಮಿಳುನಾಡು ಈ ಎರಡೂ ರಾಜ್ಯಗಳಿಗೂ ಅನುಕೂಲವಾಗಲಿದೆ ಎಂದು ಪ್ರಸ್ತಾಪಿಸಿದ್ದಾರೆ.

ಜಲಶಕ್ತಿ ಸಚಿವರು, ಕೇಂದ್ರ ಜಲ ಆಯೋಗದ ಪ್ರಾಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿ ವಿಸ್ತೃತ ಯೋಜನಾ ವರದಿಗೆ ಮಂಜೂರಾತಿ ನೀಡುವುದು ಹಾಗೂ ಮೇಕೆದಾಟು ಯೋಜನೆಯ ಅನುಷ್ಠಾನಕ್ಕೆ ಅಗತ್ಯ ನಿರಾಕ್ಷೇಪಣಾ ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ.

ಭದ್ರಾ ಮೇಲ್ದಂಡೆ ಯೋಜನೆಗಾಗಿ ಈ ಹಿಂದೆ 2023–24ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದಂತೆ 5300 ಕೋಟಿ ರೂ.ಗಳ ಅನುದಾನವನ್ನು ಶೀಘ್ರವೇ ಬಿಡುಗಡೆ ಮಾಡಬೇಕೆಂದು ಮನವಿ ಮಾಡಿದ್ದಾರೆ.

ಕೃಷ್ಣಾ ನದಿ ನೀರು ವಿವಾದದ ಕುರಿತು ಪ್ರಸ್ತಾಪಿಸಿರುವ ಮುಖ್ಯಮಂತ್ರಿಯವರು ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ಯೋಜನೆಯೆಂದು ಘೋಷಣೆ ಮಾಡಬೇಕು. ಆಂಧ್ರ ಪ್ರದೇಶ ಮತ್ತು ತೆಲಂಗಾಣ ನಡುವಿನ ನೀರಿನ ಹಂಚಿಕೆ ತಗಾದೆಗೆ ಸಂಬಂಧಪಟ್ಟಂತ ಅರ್ಜಿಯನ್ನು ಇತ್ಯರ್ಥಪಡಿಸಲು ಕೂಡಲೇ ಸುಪ್ರೀಂಕೋರ್ಟ್‌ಗೆ ಸಮರ್ಪಕ ಅರ್ಜಿ ಸಲ್ಲಿಸಬೇಕು ಎಂದು ಮನವಿ ಮಾಡಿದ್ದಾರೆ.

ಕಳಸಾ ಬಂಡೂರಿ ನಾಲಾ ಯೋಜನೆಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿ ವತಿಯಿಂದ ಅಗತ್ಯ ಪೂರ್ವಾನುಮತಿ ಕೊಡಿಸಬೇಕು ಎಂದು ಮನವಿ ಮಾಡಿದ್ದಾರೆ. ಪ್ರಮುಖವಾಗಿ ಗೋದಾವರಿ–ಕಾವೇರಿ ನದಿ ಜೋಡಣೆ, ಬೇಡ್ತಿ–ವರದಾ ನದಿ ಜೋಡಣೆ ಯೋಜನೆಯಲ್ಲಿ ಕರ್ನಾಟಕಕ್ಕೆ ಹೆಚ್ಚಿನ ನೀರು ದೊರೆಯುವಂತೆ ಕಾಳಜಿ ವಹಿಸಬೇಕು ಎಂದು ಮನವಿ ಮಾಡಿದ್ದಾರೆ.

ತೆಲಂಗಾಣ, ಆಂಧ್ರಪ್ರದೇಶ, ತಮಿಳುನಾಡು, ಕರ್ನಾಟಕ ಸೇರಿದಂತೆ ನಾಲ್ಕು ರಾಜ್ಯಗಳ ನಡುವೆ ಹರಿಯುವ ಈ ನದಿಗಳನ್ನು ಜೋಡಣೆ ಮಾಡುವ ಪ್ರಸ್ತಾವನೆ ಚಾಲ್ತಿಯಲ್ಲಿದೆ. ಮತ್ತಷ್ಟು ಸಮಾಲೋಚನಾ ಸಭೆಗಳನ್ನು ನಡೆಸಿ ರಾಜ್ಯವಾರು ನೀರಾವರಿ ಪ್ರದೇಶಗಳಲ್ಲಿ ಭೇಟಿ ನೀಡಿ ಪುನರ್ ಪರಿಶೀಲನೆ ಮಾಡುವ ಮೂಲಕ ರಾಜ್ಯಕ್ಕೆ ನ್ಯಾಯೋಚಿತವಾಗಿ ನೀರಿನಲ್ಲಿ ಹೆಚ್ಚಿನ ಪಾಲು ಕೊಡಿಸುವಂತೆ ಮನವಿ ಮಾಡಿದ್ದಾರೆ.

# ಯುಕ್ತಧಾರ ತಂತ್ರಾಂಶದ ತರಬೇತಿ ಪ್ರಾಯೋಗಿಕ ಕಾರ್ಯಾಗಾರ

**ಜನವಾದಿ ವಾರ್ತೆ**


ರಾಯಚೂರು ಏ 03 – ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದವರ ನಿರ್ದೇಶನದಂತೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಸಮಗ್ರ ನೈಸರ್ಗಿಕ ಸಂಪನ್ಮೂಲ (ಎನ್ ಆರ್ ಎಮ್) ನಿರ್ವಹಣೆ ಕಾಮಗಾರಿಗಳಿಗೆ ಜಿಐಎಸ್ ಆಧಾರಿತ ಯೋಜನೆಗಳನ್ನು ವೈಜ್ಞಾನಿಕವಾಗಿ ಯುಕ್ತಧಾರ ತಂತ್ರಾಂಶದಲ್ಲಿ ತಯಾರಿಸಲು ಹಾಗೂ 2025–26ನೇ ಸಾಲಿನಲ್ಲಿ ಯುಕ್ತಧಾರ ತಂತ್ರಾಂಶದ ಮೂಲಕ ಯೋಜನೆಯನ್ನು ಸಿದ್ಧಪಡಿಸಲು ಪ್ರಾಯೋಗಿಕವಾಗಿ ತರಬೇತಿ ಕಾರ್ಯಾಗಾರವನ್ನು ನಗರದ ಜಿಲ್ಲಾ ಪಂಚಾಯತಿಯ ಜಲನಿರ್ಮಲ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆಸರಟ್ಟಿ ಅವರು ಮಾತನಾಡಿ, ನರೇಗಾ ಯೋಜನೆಯಡಿ ಜಲನಯನ ಮಾದರಿಯಲ್ಲಿ ವೈಜ್ಞಾನಿಕವಾಗಿ ಯೋಜನೆಯನ್ನು ಸಿದ್ಧಪಡಿಸಲು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಚಿಂಚೋಡಿ, ಲಿಂಗಸೂಗೂರು ತಾಲ್ಲೂಕಿನ ಅನ್ವರಿ, ಮಾನವಿ ತಾಲ್ಲೂಕಿನ ಕಪಗಲ್, ಮಸ್ಕಿ ತಾಲ್ಲೂಕಿನ ಅಡವಿಬಾವಿ ಮಸ್ಕಿ, ರಾಯಚೂರು ತಾಲ್ಲೂಕಿನ ಬಿಚ್ಚಾಲಿ, ಸಿಂಧನೂರು ತಾಲ್ಲೂಕಿನ ಉಮಲೂಟಿ ಹಾಗೂ ಸಿರವಾರ ತಾಲ್ಲೂಕಿನ ಚಿಂಚರಕಿ ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಲಾಗಿದೆ. ಈ ಗ್ರಾ.ಪಂಗಳಲ್ಲಿ ಸಮಗ್ರ ನೈಸರ್ಗಿಕ ಸಂಪನ್ಮೂಲ (ಎನ್.ಆರ್.ಎಮ್) ನಿರ್ವಹಣೆ ಕಾಮಗಾರಿಗಳಿಗೆ ಜಿ.ಐ.ಎಸ್ ಆಧಾರಿತ ಯೋಜನೆಗಳನ್ನು ವೈಜ್ಞಾನಿಕವಾಗಿ ಯುಕ್ತಧಾರ ತಂತ್ರಾಂಶದಲ್ಲಿ ತಯಾರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಗ್ರಾಮ ಪಂಚಾಯತ್ ಅಧ್ಯಕ್ಷರು, ಪಿ.ಡಿ.ಒ., ಎಡಿಪಿಸಿ, ಎನ್.ಆರ್.ಡಿ.ಎಂ.ಎಸ್, ತಾಂತ್ರಿಕ ಸಂಯೋಜಕರು, ಎಂಐಎಸ್ ಸಂಯೋಜಕರು, ತಾಂತ್ರಿಕ ಸಹಾಯಕರು, ಜಿ.ಐ.ಎಸ್.ಎಕ್ಸ್‌ಪರ್ಟ್, ಬಿಎಫ್ಟಿ, ಗ್ರಾಮ ಕಾಯಕ ಮಿತ್ರ, ತಾಂತ್ರಿಕ ಸಹಾಯಕರು (ಕೃಷಿ) ಹಾಗೂ ಸಂಬಂಧ ಪಟ್ಟ ಹೋಬಳಿ ಮಟ್ಟದ ಕೃಷಿ ಅಧಿಕಾರಿಗಳು ಕಾರ್ಯಾಗಾರದಲ್ಲಿ ಇದ್ದರು.

# ವಚನಯಾನ | ಕರ್ಮ ಸಿದ್ಧಾಂತ ಧಿಕ್ಕರಿಸಿದ ಶರಣರು

ಕರ್ಮ ಸಿದ್ಧಾಂತವನ್ನು ನಾನು ನಂಬುವುದಿಲ್ಲ. ಈ ಸಿದ್ಧಾಂತವೇ ಒಂದು ಟೊಳ್ಳು ಮತ್ತು ಅದರಲ್ಲಿ ಅನೇಕ ಅಡಚಣೆಗಳಿವೆ. ದಯಾನಿಧಿಯಾದ ದೇವ ನಿನ್ನಲ್ಲಿ ವಿಜ್ಞಾಪನೆ ಮಾಡಿಕೊಳ್ಳುತ್ತಿದ್ದೇನೆ. ನಿನ್ನ ಸೇವಕನ ಮಾತನ್ನು ಆಲಿಸು ಎಂದು ದೇವರನ್ನು ಬಸವಣ್ಣನವರು ಬಿನ್ನವಿಸುತ್ತಾರೆ.



ಭಾರತವನ್ನು ಶತಶತಮಾನಗಳಿಂದ ಹಿಂದುಳಿದ ದೇಶವಾಗಿ ಮಾರ್ಪಡಿಸಿದ್ದೆ ಇಲ್ಲಿ ಸನಾತನಿಗಳು ನೆಟ್ಟ ಕರ್ಮಸಿದ್ಧಾಂತವೆಂಬ ಪಾರ್ಥೇನಿಯಮ್ ಕಳೆ. ಆಡು ಭಾಷೆಯಲ್ಲಿ ಕರ್ಮವೆಂದರೆ ಕೆಲಸ, ಅಥವಾ ಮಾಡಿದ್ದು, ಮಾಡುವುದು ಎಂದರ್ಥ. ಸಿದ್ಧಾಂತವಾಗಿ ಕರ್ಮವೆಂದರೆ ಮನುಷ್ಯನ ಸುಖ–ದುಃಖಗಳಿಗೆ ಕಾರಣವಾಗುವ ಪೂರ್ವಜನ್ಮದ ಕೃತ್ಯಗಳು ಎಂದರ್ಥ. ಹೀಗೆಂದು ಸನಾತನ ಬ್ರಾಹ್ಮಣ ಧರ್ಮ ನಂಬುತ್ತದೆ ಮತ್ತು ಇತರರನ್ನು ನಂಬಿಸುತ್ತದೆ. ಅಂದರೆ ಹಿಂದಿನ ಜನ್ಮದಲ್ಲಿ ಮಾಡಿದ ಪುಣ್ಯದಿಂದ ಇಂದಿನ ಜನ್ಮದಲ್ಲಿ ಒಳ್ಳೆಯದಾಗುತ್ತದೆ ಮತ್ತು ಪಾಪ ಕಾರ್ಯಗಳಿಂದ ಕೆಟ್ಟದ್ದಾಗುತ್ತದೆ ಎನ್ನುವ ನಂಬಿಕೆ. ಮನುಷ್ಯ ಮಾಡಿದ ಕರ್ಮವು ಜನ್ಮದಿಂದ ಜನ್ಮಕ್ಕೆ ಹರಿದು ಅದು ಮುಂದಿನ ಜನ್ಮದ ಮೇಲೆ ತನ್ನ ಪರಿಣಾಮವನ್ನು ಬೀರುತ್ತದೆ ಹಾಗೂ ಸತತ ಮರುಜನ್ಮದ ಚಕ್ರವನ್ನು ಉಂಟುಮಾಡುತ್ತದೆ ಎನ್ನುವ ವಾದ. ಪುನರ್ಜನ್ಮದ ಚಕ್ರವು ಅಂತಿಮಗೊಂಡಾಗ ವ್ಯಕ್ತಿಗೆ ಮೋಕ್ಷ ಸಿಗುತ್ತದೆ ಎನ್ನುವ ಪರಿಕಲ್ಪನೆ. ಎಲ್ಲಾ ಮರುಜನ್ಮಗಳಲ್ಲಿ ಮಾನವನಾಗಿಯೆ ಹುಟ್ಟುವ ಭರವಸೆ ಇರುವುದಿಲ್ಲ ಹಾಗೂ ಕೊನೆಗೆ ಈ ಚಕ್ರದಿಂದ ಜೀವನ್ಮುಕ್ತಿ ಪಡೆಯಲು ಮಾನವ ಜನ್ಮದಿಂದ ಮಾತ್ರ ಸಾಧ್ಯ ಎನ್ನುವ ವಾದವೆ ಕರ್ಮಸಿದ್ಧಾಂತ. ಕರ್ಮಸಿದ್ಧಾಂತವನ್ನು ಭಾರತದ ಎಲ್ಲಾ ದರ್ಶನಗಳು ಒಮ್ಮತದಿಂದ ಅಂಗೀಕರಿಸಿವೆ ಎಂದು ಸನಾತನಿಗಳು ವಾದಿಸುತ್ತಾರೆ. ಭಾರತದ ಎಲ್ಲಾ ದರ್ಶನಗಳು ಸನಾತನ ದರ್ಶನದ ಭಾಗ ಎಂದು ವಾದಿಸುವವರು ಹೀಗೆ ಸಮರ್ಥಿಸುವುದು ಸಹಜ.

ಸನಾತನಿಗಳು ತಮ್ಮ ವಾದವನ್ನು ಹೀಗೆ ಹರಿಬಿಡುತ್ತಾರೆ: ಕರ್ಮ ಸಿದ್ಧಾಂತವು ಜೈನ ಹಾಗೂ ಬೌದ್ಧದರ್ಶನಗಳಲ್ಲಿಯೂ ಕಾಣಸಿಗುತ್ತದೆ. ಜೈನ ದರ್ಶನದ ಪ್ರಕಾರ ಕರ್ಮವು ಪ್ರಸಕ್ತವಾಗಿ ಸಾಗುತ್ತಾ ಅದು ಕಾಲುವೆಯಲ್ಲಿ ಹರಿವ ನೀರಿನಂತೆ ಆಸ್ರವವೆಂದೆನಿಸುತ್ತದೆ. ಜೀವ ಹಾಗೂ ಕರ್ಮಗಳ ನಡುವಿನ ಅನ್ಯೋನ್ಯ ಸಂಬಂಧವೇ ಬಂಧನ. ಬಂಧನಕ್ಕೆ ವಿರುದ್ಧವಾಗಿ ಸಂವರವು ಕರ್ಮವನ್ನು ತಡೆಯುತ್ತದೆ. ಆಸ್ರವ ಅಥವಾ ಕರ್ಮದ ಪ್ರಸಕ್ತಿಯಿಂದ ಸಂಸಾರ ಬಂಧನ, ಅದರ ನಿರೋಧ ಅಥವಾ ಸಂಹಾರದಿಂದ ಮೋಕ್ಷ ಅಥವಾ ಕೈವಲ್ಯ. ಜೈನ ಧರ್ಮದಲ್ಲಿ ಸಂಚಿತ ಕರ್ಮ ಮತ್ತು ಪುನರ್ಜನ್ಮಗಳಿವೆ ಎನ್ನುತ್ತಾರೆ ಸನಾತನಿಗಳು. ಆ ಕರ್ಮಗಳ ಕ್ಷಯಕ್ಕಾಗಿ ತೀರ್ಥಂಕರರು ಯೋಗಮಾರ್ಗವನ್ನು ಬೋಧಿಸಿದ್ದಾರಂತೆ. ಆದರೆ ಜೈನರಲ್ಲಿ ಜೀವ, ಅಜೀವ, ಆಸ್ರವ ಬಂಧ, ಸಂವರ, ನಿರ್ಜರ, ಮೋಕ್ಷ ಎಂಬ ಸಪ್ತಪದಾರ್ಥಗಳು ಸ್ಪಷ್ಟವಾಗಿ ಕರ್ಮವನ್ನು ಪ್ರತ್ಯೇಕವಾಗಿ ಒಳಗೊಳ್ಳುವುದಿಲ್ಲ. ಜೈನರ ಮೋಕ್ಷಮಾರ್ಗಗಳೆಂದರೆ ಸಮ್ಯಕ್ ದರ್ಶನ, ಸಮ್ಯಕ್ ಜ್ಞಾನ ಮತ್ತು ಸಮ್ಯಕ್ ಚಾರಿತ್ರಗಳು. ಅಹಿಂಸಾ, ಸತ್ಯ, ಅಸ್ತೇಯ, ಬ್ರಹ್ಮಚರ್ಯ, ಅಪರಿಗ್ರಹ ಈ ಪಂಚಮಹಾವ್ರತಗಳು ಕರ್ಮವನ್ನು ಹೇಳುವುದಿಲ್ಲ. ಇನ್ನು ಬೌದ್ಧ ದರ್ಶನವಂತೂ ಆತ್ಮವು ನಂಬಲ್ಲ, ಕರ್ಮವೂ ನಂಬಲ್ಲ. ಆದರೂ ಸನಾತನಿಗಳು ಬೌದ್ಧದರ್ಶನದಲ್ಲಿಯೂ ಕರ್ಮಸಿದ್ಧಾಂತ ಇದೆ ಎಂದು ವಾದಿಸುತ್ತಾರೆ. ಮಾಡುವಾಗ ಪರಿಜ್ಞಾನವಿಲ್ಲದೆ ಮಾಡಿ, ಅದರ ಫಲ ಒದಗಿದಾಗ ಅಳುಮುಖದಿಂದ ಅನುಭವಿಸುವ ಪ್ರಸ್ತಾಪ ಧಮ್ಮಪದದಲ್ಲಿದೆಯಂತೆ.

ಕರ್ಮಸಿದ್ಧಾಂತ ಆರಂಭವಾಗುವುದೆ ಪಾಪ ಹಾಗೂ ಪುಣ್ಯಗಳಿಂದ. ಮನುಷ್ಯ ತಮ್ಮ ಜೀವನದಲ್ಲಿ ಮಾಡಿದ ಪಾಪ ಹಾಗೂ ಪುಣ್ಯಗಳ ಮೊತ್ತ ಬಗೆ ಇವುಗಳ ಆಧಾರದಲ್ಲಿ ಸತ್ತ ಮೇಲೆ ಸ್ವರ್ಗ ಅಥವಾ ನರಕಕ್ಕೆ ಹೋಗುತ್ತಾನೆ ಎನ್ನುವುದು ಸನಾತನಿಗಳ ಅಚಲ ನಂಬಿಕೆ. ಸ್ವರ್ಗ ಅಥವಾ ನರಕವಾಸದ ನಂತರ ಮುಂದೇನು ಎನ್ನುವ ಪ್ರಶ್ನೆಗೆ ಸನಾತನಿಗಳು ಪುನರ್ಜನ್ಮ ಎಂದು ಉತ್ತರಿಸುತ್ತಾರೆ. ಪುನರ್ಜನ್ಮವು ಕರ್ಮದ ಆಧಾರದಲ್ಲಿ ನಿರ್ಣಯಿಲಾಗುತ್ತದಂತೆ. ಅತಿ ಹೆಚ್ಚು ಪುಣ್ಯ ಮಾಡಿದ ಜೀವಿ ಮನುಷ್ಯನಾಗಿಯೂ ಅದರಂತೆ ಉಳಿದ 84 ಲಕ್ಷ ಜೀವ ಸಂಕುಲ ಯಾವುದಾದರೂ ರೂಪದಲ್ಲಿ ಜನ್ಮಿಸುತ್ತಾನೆ ಎನ್ನುತ್ತದೆ ಕರ್ಮಸಿದ್ಧಾಂತ. ಅಂದರೆ ಮನುಷ್ಯ ತಾನು ಈ ಜನ್ಮದಲ್ಲಿ ಮಾಡಿದ ಪಾಪ ಅಥವಾ ಪುಣ್ಯದ ಆಧಾರದಲ್ಲಿ ಸ್ವರ್ಗ ಅಥವಾ ನರಕದಲ್ಲಿ ಕೆಲವು ಸಮಯ ಕಳೆದು ಮತ್ತೆ ಆತ ಯಾವುದಾದರೂ ಜೀವಿಯಲ್ಲಿ ಮರು ಹುಟ್ಟು ಪಡೆಯುತ್ತಾನೆ. ಈ ಮರು ಹುಟ್ಟುವಿಕೆಯ ಚಕ್ರ ಆತ ಅತ್ಯಂತ ಗರಿಷ್ಠ ಮಟ್ಟದ ಪುಣ್ಯ ಮಾಡುವ ತನಕ ಮುಂದುವರೆದು ಕೊನೆಗೆ ಅದು ಜೀವನ್ಮುಕ್ತಿ ಅಥವಾ ಮೋಕ್ಷದಲ್ಲಿ ಕೊನೆಕೊಳ್ಳುತ್ತದಂತೆ. ಆ ಗರಿಷ್ಠ ಪುಣ್ಯ ಸಂಪಾದನೆ ಕೋಟಿಗಳಲ್ಲಿ ಒಬ್ಬರಿಗೂ ಅಸಾಧ್ಯ ಎಂದಾದರೆ ಮೋಕ್ಷದ ಸಾಧ್ಯತೆಗಳು ತೀರ ವಿರಳವೆಂದೆ ಅರ್ಥ. ಅಂದರೆ ಕರ್ಮ ಸಿದ್ಧಾಂತವು ಹೊರಟ ಬಿಂದುವಿನಿಂದ ಹೊರಟು ಮತ್ತದೆ ಬಿಂದುವನ್ನು ಸಂಧಿಸುವ ಎಂದಿಗೂ ಕೊನೆಗೊಳ್ಳದ ಒಂದು ನಿರಂತರ ಚಕ್ರ. ಅದರಲ್ಲಿ ಮುಮ್ಮುಖ ಚಲನೆಗೆ ಅವಕಾಶವೆ ಇಲ್ಲ ಎಂದರ್ಥ.

ಆದರೆ ಹನ್ನೆರಡನೇ ಶತಮಾನದಲ್ಲಿ ನಡೆದ ವಚನ ಚಳವಳಿ ಸನಾತನ ಸಂಸ್ಕೃತಿಯ ಪ್ರತಿಯೊಂದು ಸಿದ್ಧಾಂತವನ್ನು ತಿರಸ್ಕರಿಸಿದೆ, ಧಿಕ್ಕರಿಸಿದೆ, ವಿಮರ್ಶಿಸಿದೆ, ಹಾಗೂ ಪರ್ಯಾಯಗಳನ್ನು ನೀಡಿದೆ. ಕರ್ಮಸಿದ್ಧಾಂತದ ಅವಿಭಾಜ್ಯ ಭಾಗಗಳಾದ ಪಾಪ–ಪುಣ್ಯ, ಸ್ವರ್ಗ–ನರಕ ಹಾಗೂ ಪುನರ್ಜನ್ಮಗಳನ್ನು ವಚನಕಾರರು ಸಾರಾಸಗಟಾಗಿ ನಿರಾಕರಿಸುತ್ತಾರೆ. "ಸತ್ಯ ನುಡಿವುದೆ ದೇವಲೋಕ, ಮಿತ್ಯ ನುಡಿಯುವುದೆ ಮರ್ತ್ಯಲೋಕ, ಆಚಾರವೆ ಸ್ವರ್ಗ ಅನಾಚಾರವೆ ನರಕ" ಎಂದು ಸ್ಪಷ್ಟವಾಗಿ ಶರಣರು ಪ್ರತಿಪಾದಿಸುತ್ತಾರೆ. ನದಿ ಒಮ್ಮೆ ಸಮುದ್ರ ಸೇರಿದರೆ ಮತ್ತೆ ಹೇಗೆ ನದಿಯಾಗುವುದಿಲ್ಲವೊ ಹಾಗೆ ಒಮ್ಮೆ ಲಿಂಗ ಸಂಸ್ಕಾರಿಯಾದವನು ಮತ್ತೆ ಜನ್ಮಿಸುವುದಿಲ್ಲ ಎಂದು ಶರಣರು ಖಚಿತವಾಗಿ ಹೇಳುತ್ತಾರೆ. ಕರ್ಮ ಮಾಡು ಅದರ ಫಲವನ್ನು ನಿರೀಕ್ಷಿಸಬೇಡ ಎನ್ನುವ ಗೀತೆಯೊಳಗಿನ ನುಡಿಯನ್ನು ಶರಣರು ಅಲ್ಲಗಳೆಯುತ್ತಾರೆ. ಕೆಲವು ವಚನಗಳಲ್ಲಿ ಸ್ವರ್ಗ, ನರಕ, ಪುನರ್ಜನ್ಮ ಹಾಗೂ ಕರ್ಮಗಳ ಕುರಿತು ಶರಣರು ಕೇವಲ ರೂಪಕವಾಗಿ ಪ್ರಸ್ತಾಪಿಸುತ್ತಾರೆ. ಸನಾತನ ಧರ್ಮದಲ್ಲಿರುವ ಎಲ್ಲಾ ಬಗೆಯ ಮೌಢ್ಯಗಳು ಹಾಗೂ ನಂಬಿಕೆಗಳಿಗೆ ವ್ಯತಿರಿಕ್ತವಾದ ಸಿದ್ಧಾಂತ ವಚನಗಳಲ್ಲಿ ಕಾಣಸಿಗುತ್ತದೆ. ಶರಣರು ವೈದಿಕ ಪ್ರಣೀತ ಸ್ವರ್ಗ–ನರಕ, ಪುನರ್ಜನ್ಮ ಹಾಗೂ ಕರ್ಮಸಿದ್ಧಾಂತವನ್ನು ಸಾರಾಸಗಟಾಗಿ ನಿರಾಕರಿಸುತ್ತಾರೆ. ಬಸವಣ್ಣನವರ ಆ ಕುರಿತ ಒಂದು ವಚನ:

"ಕರ್ಮವೆಂಬ ಅಂಕದೊಡನೆ ತೊಡರಿದೆ, ಭಿನ್ನಪ ಅವಧಾರು! ನಿಮ್ಮಾಳಿನ ಭಾಷೆಯ: ಕಡೆಗಳಕ್ಕೆ ನೂಂಕುವೆ, ಕೆಡಹುವೆನಂಕವ. ಕರೆದಡೋ ಎನಿಸದಡೆ ನಿಮ್ಮಾಳಲ್ಲ. ಶಿವಶರಣೆಂಬ ದಂಡೆಯ ಹೂಡಿ ಗಣಮೇಳಾಪವೆಂಬ ಅಲಗಿನಿಂದಿರುವೆ, ಕೂಡಲಸಂಗಮದೇವಾ."

**ಭಾವಾರ್ಥ**

ಕರ್ಮ ಸಿದ್ಧಾಂತವನ್ನು ನಾನು ನಂಬುವುದಿಲ್ಲ. ಈ ಸಿದ್ಧಾಂತವೇ ಒಂದು ಟೊಳ್ಳು ಮತ್ತು ಅದರಲ್ಲಿ ಅನೇಕ ಅಡಚಣೆಗಳಿವೆ. ದಯಾನಿಧಿಯಾದ ದೇವ ನಿನ್ನಲ್ಲಿ ವಿಜ್ಞಾಪನೆ ಮಾಡಿಕೊಳ್ಳುತ್ತಿದ್ದೇನೆ. ನಿನ್ನ ಸೇವಕನ ಮಾತನ್ನು ಆಲಿಸು ಎಂದು ದೇವರನ್ನು ಬಸವಣ್ಣನವರು ಬಿನ್ನಹಿಸುತ್ತಾರೆ. ವೈದಿಕರು ಪ್ರತಿಪಾದಿಸಿದ ಈ ಟೊಳ್ಳು ಕರ್ಮಸಿದ್ಧಾಂತವನ್ನು ಕಡೆಗಣಿಸುವೆ. ಅದನ್ನು ಕಾಲಿನಿಂದ ಆ ಕಡೆಗೆ ನೂಕುವೆ. ನೀನು ಇದನ್ನು ಒಪ್ಪು ಎಂದರೆ ನಾನು ಒಪ್ಪುವುದಿಲ್ಲ. ಏಕೆಂದರೆ ಕೆಟ್ಟದನ್ನು, ಜೀವವಿರೋಧಿ ಸಿದ್ಧಾಂತವನ್ನು ಒಪ್ಪಲು ನಾನು ನಿನ್ನ ಆಳಲ್ಲ ಎಂದು ಬಸವಣ್ಣನವರು ದೇವರನ್ನೇ ನಿಷ್ಠುರವಾಗಿ ಎಚ್ಚರಿಸುತ್ತಾರೆ. ಈ ಕರ್ಮಸಿದ್ಧಾತವೆಂಬ ಟೊಳ್ಳು ವ್ಯವಸ್ಥೆಯನ್ನು ದಿಕ್ಕರಿಸಿ ಕಾಯಕ ಪ್ರಧಾನವಾದ ವೈಚಾರಿಕ ಶರಣ ಧರ್ಮವನ್ನು ಅನುಭವ ಮಂಟಪವೆಂಬ ಪ್ರಜಾಸಂಸತ್ತಿನಲ್ಲಿ ಶಿವಶರಣರ ಮಂಥನದಿಂದ ಸ್ಥಾಪಿಸಿ ಮುನ್ನುಗ್ಗುತ್ತಿರುವೆ ಎಂದು ಬಸವಣ್ಣನವರು ಸ್ಪಷ್ಟವಾಗಿ ಹೇಳುತ್ತಾರೆ. ಶರಣರನ್ನು ಗಣಂಗಳು ಎನ್ನುತ್ತಾರೆ. ಅವರು ಬರೆದ ವಚನಗಳನ್ನು ಗಣಭಾಷಿತಗಳು ಎನ್ನಲಾಗುತ್ತದೆ. ಆ ಗಣಭಾಷಿತಗಳನ್ನು ಅನುಭವ ಮಂಟಪದಲ್ಲಿ ಮಂಥಿಸುವ ಕ್ರಿಯೆಗೆ ಗಣಮೇಳಾಪ ಎನ್ನಲಾಗುತ್ತದೆ. ಶರಣರನ್ನು ಸೈನಿಕರಂತೆ ಸಂಘಟಿಸಿ ಸನಾತನ ಧರ್ಮದ ವಿರುದ್ಧ ಆಂದೋಲನ ಮಾಡುವೆ ಎನ್ನುವ ಮುನ್ಸೂಚನೆ ಈ ವಚನದಲ್ಲಿ ಬಸವಣ್ಣನವರು ನೀಡಿದ್ದಾರೆ. "ಗಣಮೇಳಾಪವೆಂಬ ಅಲಗಿನಿಂದಿರಿವೆ" ಎನ್ನುವ ನುಡಿ ಸನಾತನಿಗಳ ಸಿದ್ಧಾಂತವನ್ನು ಸಂಘಟಿತವಾಗಿ ನೀಗಿಕೊಳ್ಳುವೆ ಎಂಬ ಅರ್ಥವನ್ನು ನೀಡುತ್ತದೆ.

**ಟಿಪ್ಪಣಿ**

ಶರಣಧರ್ಮವು ವೈದಿಕರ ಕರ್ಮಸಿದ್ಧಾಂತವನ್ನು ಸಂಪೂರ್ಣವಾಗಿ ತಿರಸ್ಕರಿಸುತ್ತದೆ. ಮನುಷ್ಯ ತನ್ನ ಪಾಲಿಗೆ ಬಂದ ಕರ್ಮವನ್ನು ಯಾವ ಫಲಾಪೇಕ್ಷೆಯೂ ಇಲ್ಲದೆ ಮಾಡುತ್ತಿರಬೇಕು ಫಲಾಫಲವನ್ನು ನಿರೀಕ್ಷಿಸಬಾರದು ಎನ್ನುವುದೆ ಕರ್ಮ ಸಿದ್ಧಾಂತ ಜೀವಾಳ. ಈ ಸಿದ್ಧಾಂತವು ಕೆಲಸವನ್ನು ಮಾಡಿ ಸಂಬಳವನ್ನು ಕೇಳಬಾರದು ಎಂದು ಸ್ಪಷ್ಟವಾಗಿ ಹೇಳುತ್ತದೆ. ಉದ್ದೇಶವಿರದ ಎಲ್ಲಾ ಕ್ರಿಯೆಗಳು ನಿರರ್ಥಕ ಅಥವಾ ಉದ್ದೇಶವಿರದೆ ಮಾಡುವ ಯಾವ ಕಾರ್ಯವೆ ಆಗಿರಲಿ ಅವು ಹುಚ್ಚಾಟಕ್ಕೆ ಸಮ ಎನ್ನುತ್ತವೆ ಅನೇಕ ವೈಜ್ಞಾನಿಕ ಸಿದ್ಧಾಂತಗಳು. "ಥಿಯರಿ ಆಫ್ ಯಾಕ್ಷನ್ ಇನ್ ಫಿಲಾಸಫಿ", "ಥಿಯರಿ ಆಫ್ ಮೋಟಿವೇಷನ್ ಇನ್ ಸೈಕೊಲಾಜಿ" ಮತ್ತು "ಥಿಯರಿ ಆಫ್ ಬಿಹೆವಿಯರಲ್ ಡೈನಾಮಿಕ್ಸ್ ಇನ್ ಸೈಕ್ಯಾಟ್ರಿ" ಎಂಬ ಮೂರು ವೈಜ್ಞಾನಿಕ ಸಿದ್ಧಾಂತಗಳು ಕರ್ಮಸಿದ್ಧಾಂತವನ್ನು ನಿರಾಕರಿಸುತ್ತವೆ ಮತ್ತು ಯಾವುದೆ ಉದ್ದೇಶವಿಲ್ಲದ ಕಾರ್ಯವನ್ನು ನಿರರ್ಥಕ ಅಥವಾ ಹುಚ್ಚಾಟವೆಂದು ಹೇಳುತ್ತವೆ. ಜೀವವಿಕಾಸ ಸಿದ್ಧಾಂತವನ್ನು ಪ್ರತಿಪಾದಿಸಿದ ಪ್ರಸಿದ್ಧ ವಿಜ್ಞಾನಿ ಡಾರ್ವಿನ್ ಕೂಡ ಪಾಪ ಪುಣ್ಯಕ್ಕಾಗಿ ಪೂಜೆ ಪಾಠಗಳು ಮತ್ತು ವ್ರತಗಳು ಮಾಡುವುದನ್ನು ತೀವ್ರವಾಗಿ ಖಂಡಿಸುತ್ತಾನೆ. ನೊಬೆಲ್ ಪಾರಿತೋಷಕ ಪುರಷ್ಕೃತ ಖ್ಯಾತ ಅರ್ಥಶಾಸ್ತ್ರಜ್ಞ ಅಮರ್ತ್ಯ ಸೇನ್ ತನ್ನ"ಐಡಿಯಾ ಆಫ್ ಜಸ್ಟಿಸ್" ಎಂಬ ಪುಸ್ತಕದಲ್ಲಿ ಕರ್ಮ ಸಿದ್ಧಾಂತವು ಅತೀಂದ್ರಿಯ ತರ್ಕಶಾಸ್ತ್ರದ ವಿರುದ್ಧದ ನಿಲುವು ಎನ್ನುತ್ತಾರೆ. ಈ ಎಲ್ಲಾ ಅಧುನಿಕ ವೈಜ್ಞಾನಿಕ ಸಿದ್ಧಾಂತಗಳು ಸನಾತನಿಗಳ ಕರ್ಮ ಸಿದ್ಧಾಂತವನ್ನು ವೈಜ್ಞಾನಿಕ ತಳಹದಿಯ ಮೇಲೆ ನಿರಾಕರಿಸುತ್ತವೆ.

ಹನ್ನೆರಡನೇ ಶತಮಾನದ ವಚನ ಚಳವಳಿ ಕೂಡ ಮನುಷ್ಯನ ಸುಖ–ದುಖಗಳಿಗೆ ಆತನ ಪೂರ್ವಜನ್ಮದ ಪಾಪ–ಪುಣ್ಯಗಳೆ ಕಾರಣವೆನ್ನುವ ವಾದವನ್ನು ನಿರಾಕರಿಸುತ್ತದೆ. ಪಾಪ–ಪುಣ್ಯಗಳ ಆಧಾರದಲ್ಲಿ ಪ್ರಾಪ್ತವಾಗುತ್ತವೆ ಎನ್ನಲಾದ ಸ್ವರ್ಗ ಹಾಗೂ ನರಕಗಳ ಪರಿಕಲ್ಪನೆಯಾಗಲಿ, ಅದರ ಮುಂದುವರೆದ ಭಾಗವಾದ ಪುನರ್ಜನ್ಮದ ವಾದವಾಗಲಿ ಶರಣರು ಸ್ಪಷ್ಟವಾಗಿ ನಿರಾಕರಿಸುತ್ತಾರೆ. ಬಸವಣ್ಣನವರು ಸನಾತನ ಧರ್ಮದ ಕರ್ಮಸಿದ್ಧಾಂತವನ್ನು ಸಂಪೂರ್ಣವಾಗಿ ನಿರಾಕರಿಸುತ್ತಾರೆ. ಅದಕ್ಕೆ ಪರ್ಯಾಯವಾಗಿ ಅನುಭವ ಮಂಟಪದಲ್ಲಿ ಗಣಮೇಳಾಪ (ಶರಣರ ನಡುವಿನ ಚರ್ಚೆ, ಮಂಥನ) ದ ಮೂಲಕ ಶರಣತತ್ವಗಳನ್ನು ರೂಪಿಸಿ ಅದರ ಅಲಗಿನಿಂದ ಕರ್ಮಸಿದ್ಧಾಂತವನ್ನು ನೀಗಿಕೊಳ್ಳುವೆ ಎಂಬ ಗಣಾಚಾರದ ಮಾತನ್ನು ತಮ್ಮ ಮೇಲಿನ ವಚನದಲ್ಲಿ ಸ್ಪಸ್ಟವಾಗಿ ಪ್ರತಿಪಾದಿಸಿದ್ದಾರೆ.

(ಕೃಪೆ : ಈದಿನಾ.ಕಾಂ)

– ಡಾ ಜೆ ಎಸ್ ಪಾಟೀಲ್

# ಮೊದಲನೇ ಪುಟದಿಂದ

## ನಿಖರವಾಗಿ ಬರೆಯಿಸಿ: ಯಲ್ಲಪ್ಪ ಬಾದರದಿನ್ನಿ

ಪುನಃ ಸಮೀಕ್ಷೆ ಮತ್ತು ದತ್ತಾಂಶ ಸಂಗ್ರಹಿಸುವುದಕ್ಕೆ ರಾಜ್ಯಾದ್ಯಂತ ಜಿಲ್ಲೆ,ನಗರ,ಮಹಾನಗರ ಪಾಲಿಕೆ ಸೇರಿದಂತೆ ತಾಲೂಕು ಮಟ್ಟದ ಎಲ್ಲಾ ಗ್ರಾಮಗಳಲ್ಲಿ ಮಾದಿಗ ಸಮುದಾಯದವರನ್ನು ಭೇಟಿ ಮಾಡಿ ಜಾತಿ ಸಮೀಕ್ಷೆ ನಡೆಸಿವುದಕ್ಕೆ ಏ.6 ರಿಂದ ಏ.26 ರವರೆಗೆ ಮುಂದಾಗಿರುವುದ–ರಿಂದ ಕಂದಾಯ ಇಲಾಖೆಯ ಅಧಿಕಾರಿಗಳು ಸಮೀಕ್ಷೆ ನಡೆಸುವುದಕ್ಕೆ ನಿಮ್ಮ ಮನೆಗಳಿಗೆ ಬಂದಾಗ ಸಮುದಾಯದವರು ಪರಿಶಿಷ್ಟ ಜಾತಿ–ಮಾದಿಗ ಎಂದು ನಿಖರವಾಗಿ ಬರೆಯಿಸಬೇಕು ಸಮೀಕ್ಷೆ ಸಮಯದಲ್ಲಿ ಪ.ಜಾತಿಯ ಉಪಜಾತಿಗಳು ಜನಸಂಖ್ಯೆ ಕುಟುಂಬಗಳ ಸಂಖ್ಯೆ ,ಶಿಕ್ಷಣ ,ವೃತ್ತಿ,ವಾಸಸ್ಥಳ, ಆದಾಯ,ಭೂಮಿಯ ಒಡೆತನ ಸರ್ಕಾರದಿಂದ ಪಡೆಯುತ್ತಿರುವ ಸೌಲಭ್ಯಗಳು ,ರಾಜಾಕೀಯಪ್ರಾತಿನಿಧ್ಯತೆ ಇತ್ಯದಿ ಅಂಶಗಳ ಬಗ್ಗೆ ಕೂಡ ಅಧಿಕಾರಿಗಳು ದಾಖಲಿಸಿ ಕೊಳ್ಳಬೇಕು. ಈ ಕುರಿತು ತಾಲೂಕಿನ ಎಲ್ಲಾ ಗ್ರಾಮಗಳಲ್ಲಿನ ಜನರಲ್ಲಿ ಜಾಗೃತಿ ಮೂಡಿಸಲಾಗುವುದು ಎಂದು ತಿಳಿಸಿದರು.

ದಲಿತಪರ ಮುಖಂಡರಾದ ಬಸವರಾಜ ನಕ್ಕುಂದಿ, ಪರಶುರಾಮ ಬಾಗಲವಾಡ, ಯಮುನಪ್ಪ ಜಾ.ಪನ್ನೂರು, ಪಿ.ರವಿಕುಮಾರ ವಕೀಲರು, ಯಲ್ಲಪ್ಪ ಸೀಕಲ್ ,ಪಿ.ರಮೇಶ ಗವಿಗಟ್ಟ, ಶಾಂತಕುಮಾರ ಮುಷ್ಟೂರು, ರವಿ ಗಟ್ಟು ಬಿಚ್ಚಾಲಿ, ವೀರೇಶ ಜೀನೂರು, ರವಿಕುಮಾರ್ ,ಸೇರಿದಂತೆ ಇನ್ನಿತರರು ಇದ್ದರು.

## ಜಿಲ್ಲಾಧಿಕಾರಿ ನಿತೀಶ್ ಕೆ. ದಿಢೀರ್ ಭೇಟಿ; ಪರಿಶೀಲನೆ

ಸೌಕರ್ಯಗಳನ್ನು ಪರಿಶೀಲನೆ ನಡೆಸಿದರು. ಪರಿಶೀಲನೆ ಸಮಯದಲ್ಲಿ ಹಾಜರಿದ್ದ ರೋಗಿಗಳು ಮತ್ತು ಅವರ ಕುಟುಂಬದವರ ಜೊತೆ ಜಿಲ್ಲಾಧಿಕಾ–ರಿಗಳು ಮಾತನಾಡಿದರು. ಸರ್ಕಾರಿ ಸವಲತ್ತುಗಳನ್ನು ಸಾರ್ವಜನಿಕರಿಗೆ ಸಮರ್ಪಕವಾಗಿ ತಲುಪಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು. ರೋಗಿಗಳಿಗೆ ಉತ್ತಮವಾದ ವೈದ್ಯಕೀಯ ಸೇವೆ ಮತ್ತು ಔಷಧೋಪಚಾರ ಒದಗಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ರಮೇಶಬಾಬು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಸುರೇಂದ್ರ ಬಾಬು, ಓಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಾಗರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ.ನಂದಿತಾ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್, ಡಾ.ಬಾಸ್ಕರ್ ಸೇರಿದಂತೆ ವಿವಿಧ ವಿಭಾಗದ ಮುಖ್ಯಸ್ಥರು ಹಾಗೂ ವೈದ್ಯರು ಇದ್ದರು.

## ಬೀದಿ ಬದಿ ವ್ಯಾಪಾರಸ್ಥರು ದಿಢೀರ್ ಪ್ರತಿಭಟನೆ

ಇತ್ತೀಚೆಗೆ ಜಿಲ್ಲಾ, ತಾಲೂಕು ಆಡಳಿತ ಹಾಗೂ ನಗರಸಭೆಯಿಂದ ತೆರವು ಕಾರ್ಯಾಚರಣೆ ನಡೆಸಿ, ಏಕಾಏಕಿ ಬೀದಿ ಬದಿ ವ್ಯಾಪಾರಸ್ಥರನ್ನು ಒಕ್ಕಲೆಬ್ಬಿಸಿರುವುದು ಬೀದಿ ವ್ಯಾಪಾರಿಗಳ ಜೀವನೋಪಾಯ ರಕ್ಷಣೆ ಹಾಗು ಬೀದಿ ವ್ಯಾಪಾರದ ನಿಯಂತ್ರಣ ಕಾಯ್ದೆ (2014) ಯನ್ನು ಸಂಪೂರ್ಣ ಉಲ್ಲಂಘಿಸಲಾಗಿದೆ. ಯಾವುದೇ ಕಾರಣಕ್ಕೂ ಪೊಲೀಸ್ ಕಿರುಕುಳ ನೀಡಬಾರದು ಎಂದು ಸಂಚಾಲಕರಾದ ನಾಗರಾಜ ಪೂಜಾರ್ ಆಗ್ರಹಿಸಿದರು.

ಬೀದಿ ವ್ಯಾಪಾರಿಗಳಿಗೆ ಅವರ ಹಕ್ಕಾದ ಬೀದಿ ವ್ಯಾಪಾರ ಮಾಡಲು ಅಧಿಕಾರಿಗಳು ಅಡ್ಡಿಯಾಗಿರುವುದು ಕಾಯ್ದೆಯ ವಿರೋಧಿ ಕ್ರಮವಾಗಿದೆ. ಇಲ್ಲಿನ ಬೀದಿ ವ್ಯಾಪಾರಿಗಳಿಗೆ ಸರ್ಕಾರವೇ ಗುರುತಿನ ಚೀಟಿ ನೀಡಿ, ಅವ–ರಿಂದ ಲಕ್ಷಾಂತರ ರೂಪಾಯಿ ತೆರಿಗೆ ವಸೂಲಿ ಮಾಡಿ, ಇಂದು ಬೀದಿ ವ್ಯಾಪಾರಿಗಳಿಗೆ ವ್ಯಾಪಾರ ಮಾಡದಂತೆ ಅಡ್ಡಿಪಡಿಸುತ್ತಿರುವುದು ಸರಿಯಾದ ಕ್ರಮವಲ್ಲ.ಬೀದಿ ವ್ಯಾಪಾರಿಗಳನ್ನು ಎತ್ತಂಗಡಿ ಮಾಡಲು/ಸ್ಥಳಾಂತರಿಸಲು ನೋಟಿಸ್ ನೀಡುವುದು ಸಿಂಧನೂರು ಸಿಎಂಸಿ ಹಾಗೂ ಪಟ್ಟಣ ವ್ಯಾಪಾರ ಸಮಿತಿಗೆ ಮಾತ್ರ ಅಧಿಕಾರವಿದೆ. ಬೀದಿ ವ್ಯಾಪಾರಿಗಳ ಕಾನೂನಿನ ಕಲಂ 18ರ ಪ್ರಕಾರ ಆಯಾ ನಗರಸಭೆಯಲ್ಲಿನ ಪಟ್ಟಣ ವ್ಯಾಪಾರ ಸಮಿತಿ ಈ ಕುರಿತು ಕ್ರಮ ತೆಗೆದುಕೊಳ್ಳಬಹುದೇ ಹೊರತು, ಬೇರೆ ಯಾವ ಅಧಿಕಾ–ರಿಗಳೂ ಅವರನ್ನು ಸ್ಥಳಾಂತರಿಸುವಂತಿಲ್ಲ. ಹಾಗಾಗಿ ಲೋಕೋಪಯೋಗಿ ಇಲಾಖೆಯಿಂದ ಬೀದಿ ವ್ಯಾಪಾರಸ್ಥರಿಗೆ ನೀಡಿರುವ ನೋಟಿಸ್ ಕಾನೂನು ಬಾಹಿರವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದೆ ಸಂದರ್ಭದಲ್ಲಿ ಮಲ್ಲಿಕಾರ್ಜುನ ಪಾಟೀಲ್, ನಗರಸಭೆ ಸದಸ್ಯರು ಖಾಸಿಂ ಸಾಬ್ ಕಾರ್ಪೊರೇಟರ್, ಸಾದಿಕ್ ಹುಸೇನ್, ಲಾಲ್ ಸಾಬ್, ರಸೂಲ್ ಸಾಬ್, ರಹೀಮ್ ಸಾಬ್, ಮಹಿಬೂಬ್, ಸಾದಿಕ್ ಮೆಕಾನಿಕ್ , ಯಕೂಬ್, ಹುಸೇನ್ ಸೇರಿದಂತೆ ಇತರರು ಇದ್ದರು.

## ಹೋಗಲು ವೇದಿಕೆ ಸಜ್ಜು–ಬಸವರಾಜ ಕಳಸ

ಕುಮಾರ ಸ್ವಾಮಿ,ರಾಜ್ಯ ಸಭಾ ಸದಸ್ಯರಾದ ಸುಧಾಮರ್ತಿ ಅವರು ಬೆಂಬಲ ವ್ಯಕ್ತಪಡಿಸಿದ್ದಾರೆ. ಸುಧಾಮೂರ್ತಿ ಅವರು ಒಂದು ಹೆಜ್ಜೆ ಮುಂದು ಹೋಗಿ ಸಚಿವೆ ನಿರ್ಮಾಲಸೀತರಾಮ ಅವರನ್ನು ಭೇಟಿಯಾಗಿ ಚರ್ಚಿಸಿದ್ದಾರೆಂದರು.ಕೊನೆಗೆ ಸಚಿವ ಪ್ರಹ್ಲಾದ ಜೋಶಿ ಅವರನ್ನು ಭೇಟಿ ಮಾಡಿ ಚರ್ಚಿಸಿದಾಗ ಅವರು ಮೊದಲಿಗೆ ಏಮ್ಸ್ ಹೋರಾಟಗಾರ ಬಗ್ಗೆ ಬೇಸರ ವ್ಯಕ್ತಪಡಿಸಿದರು.ನಾನು ಎಲ್ಲಿಯೂ ರಾಯಚೂರಿಗೆ ಏಮ್ಸ್ ನೀಡಬಾರದೆಂದು ಹೇಳಿಲ್ಲ, ಹುಬ್ಬಳ್ಳಿ–ಧಾರವಾಡಕ್ಕೆಯೂ ಕೇಳಿಲ್ಲ, ಆದರೆ ನನ್ನ ಫೋಟೋ ಸುಟ್ಟು ಪ್ರತಿಭಟನೆ ಮಾಡಿದ್ದು ಸರಿಯೇ ಎಂದು ಪ್ರಶ್ನಿಸಿದರು. ನಂತರ ನಾವು ಅದು ಒಂದು ಹೋರಾಟದ ಭಾಗವಾಗಿದೆ ಎಂದು ಹೇಳಿ ಅವರ ಮನವರಿಕೆ ಮಾಡಿದ ನಂತರ ಅವರು ಬೆಂಬಲಿಸುದಾಗಿ ಭರವಸೆ ನೀಡಿದ್ದಾರೆಂದರು.ಈ ಸಂದರ್ಭದಲ್ಲಿ ಅಶೋಕ ಕುಮಾರ ಜೈನ್, ಎಂ.ಆರ್.ಬೇರಿ, ಸಂತೋಷ ಕುಮಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕವಿತಾಳ: ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳಿಗೆ ತಹಸೀಲ್ದಾರ್ ಭೇಟಿ



ಜನವಾದಿ ವಾರ್ತೆ

ಕವಿತಾಳ ಏ 3 – ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳಿಗೆ ಬುಧವಾರ ಭೇಟಿ ನೀಡಿದ್ದ ಸಿರವಾರ ತಹಸೀಲ್ದಾರ ರವಿ ಎಸ್. ಅಂಗಡಿ ಅವರು ಅಲ್ಲಿನ ವ್ಯವಸ್ಥೆಯನ್ನು ಪರಿಶೀಲಿಸಿದರು.ನಂತರ ಪರೀಕ್ಷೆಗೆ ಸಂಬಂದಿಸಿದ ವಿವಿಧ ಮಾಹಿತಿಯನ್ನು ಪಡೆದುಕೊಂಡರು.

ನಂತರ ಪಟ್ಟಣದಲ್ಲಿ ರಾಮ ನವಮಿಯಂದು ನಡೆಯಲಿರುವ ತ್ರಿಯಂಭಕೇಶ್ವರ ಜಾತ್ರೆ ಪ್ರಯುಕ್ತ ದೇವಸ್ಥಾನಕ್ಕೆ ಭೇಟಿ ನೀಡಿದ ಅವರು ಜಾತ್ರೆ ಸಿದ್ದತೆ ಕುರಿತು ದೇವಸ್ಥಾನ ಸಮಿತಿ ಅಧ್ಯಕ್ಷರ ಜತೆ ಚರ್ಚಿಸಿದರು. ಸಾರ್ವಜನಿಕರಿಗೆ ತೊಂದರೆ ಆಗದಂತೆ ವ್ಯವಸ್ಥೆಯನ್ನು ಕಲ್ಪಿಸಲು ಹೇಳಿದರು.

ನಂತರ ಪಟ್ಟಣಕ್ಕೆ ಕುಡಿಯುವ ನೀರು ಪೂರೈಸುವ ನಾರಾಯಣಪ್ಪ ಕ್ಯಾಂಪ್ನಲ್ಲಿರುವ ಕೆರೆಗೆ ಭೇಟಿ ನೀಡಿ ಪರಿಶೀಲಿಸಿದ ಅವರು ಏ. 10 ಕ್ಕೆ ಕಾಲುವೆ ನೀರು ಸ್ಥಗಿತವಾಗುವ ಸಾಧ್ಯತೆ ಇದ್ದು, ಅಷ್ಟರಲ್ಲಿ ಕೆರೆಗೆ ನೀರು ಭರ್ತಿ ಮಾಡಬೇಕು. ಬೇಸಿಗೆ ಅವಧಿಯಲ್ಲಿ ನೀರಿನ ಸಮಸ್ಯೆ ಉಂಟಾಗದಂತೆ ಎಚ್ಚರ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮ ಆಡಳಿತಾಧಿಕಾರಿ ಸದಾಕ್ ಅಲೀ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಜಗನ್ನಾಥ ಕುಲ್ಕರ್ಣಿ, ಇಂಜಿನಿಯರ್ ಕೃಷ್ಣಪ್ಪ ಇದ್ದರು.

## ಜಾಲಹಳ್ಳಿ: ನಮ್ಮ ಕರ್ನಾಟಕ ಸೇನೆ ಪದಾಧಿಕಾರಿಗಳ ನೇಮಕ




ಜನವಾದಿ ವಾರ್ತೆ

ಜಾಲಹಳ್ಳಿ ಏ 3– ನಮ್ಮ ಕರ್ನಾಟಕ ಸೇನೆಯ ದೇವದುರ್ಗ ಹಾಗೂ ಜಾಲಹಳ್ಳಿ ಸ್ಥಳೀಯ ಸಮಿತಿಯ ವಿವಿಧ ಘಟಕಗಳಿಗೆ ಪದಾಧಿಕಾರಿಗಳನ್ನು ಶುಕ್ರವಾರ ಜಾಲಹಳ್ಳಿ ಪ್ರವಾಸಿ ಮಂದಿರದಲ್ಲಿ ಆಯ್ಕೆ ಮಾಡಲಾಗಿದೆ ಎಂದು ಸಂಘಟನೆಯ ಜಿಲ್ಲಾ ಅದ್ಯಕ್ಷರಾದ ಕೆ ಕೊಂಡಪ್ಪ ಪತ್ರಿಕೆಗೆ ತಿಳಿಸಿದ್ದಾರೆ.

ದೇವದುರ್ಗ ತಾಲ್ಲೂಕು ಯುವ ಘಟಕದ ಅದ್ಯಕ್ಷರಾಗಿ ಬಸವರಾಜ ನಾಯಕ ಲಿಂಗದಹಳ್ಳಿ, ಸಂಚಾಲಕರಾಗಿ ಅಮರೇಶ ಹಾಗೂ ಸಾಮಾಜಿಕ ಜಾಲತಾಣದ ಅದ್ಯಕ್ಷರಾಗಿ ರಮೇಶ್ ವಂದ್ಲಿ ಆಯ್ಕೇಯಾಗಿದ್ದಾರೆ.

ಜಾಲಹಳ್ಳಿ ಹೋಬಳಿ ಘಟಕದ ಅದ್ಯಕ್ಷರಾಗಿ ಶ್ರೀನಿವಾಸ ನಾಯಕ ಯರಕಮಟ್ಟಿ, ಪ್ರಧಾನ ಕಾರ್ಯದರ್ಶಿಯಾಗಿ ಅಂಕಿತ್ ನಾಯಕ, ಸಂಚಾಲಕರಾಗಿ ಸಚಿನ್ ಜಾಡರ್ ಪದಾಧಿಕಾರಿಗಳಾಗಿ, ಆಂಜಿನೈಯ್ಯ, ಶಿವರಾಜ, ಗೋವಿಂದ್ ತ್ಯಾಪ್ಲಿ, ಶಿವು, ರಂಗನಾಥ, ಬುಳ್ಳಯ್ಯ, ಕನಕಪ್ಪ, ಸಿದ್ದಪ್ಪ, ಸಂತೋಷ, ಮುದ್ದಪ್ಪ ಯರಕಮಟ್ಟಿ, ಹನ್ಮಂತ್ರಾಯ ವಿರಘೋಟ, ಸುರೇಶ್ ವಿರಘೋಟ, ಅಮರೇಶ್, ಚಂದ್ರು, ಮೌನೇಶ್, ಆಂಜಿನೈಯ್ಯ, ವಿರೇಶ್ ಸೇರಿದಂತೆ ಇಪ್ಪತ್ತು ಜನರ ಸಮಿತಿಯನ್ನ ಆಯ್ಕೆ ಮಾಡಲಾಗಿದೆ ಎಂದು ಪತ್ರಿಕೆಗೆ ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಚಾಲಕರಾದ ಎಂ ಎಸ್ ವೆಂಕಟೇಶ್, ತಾಲೂಕ ಅದ್ಯಕ್ಷರಾದ ಭೀಮನಗೌಡ ಎಮ್ ಪಾಟೀಲ್, ಆಟೋಚಾಲಕ ಸಂಘದ ಜಿಲ್ಲಾಧ್ಯಕ್ಷ ನಾಗರಾಜ, ಮಹೇಶ್ ಪಾಟೀಲ್, ಉಸ್ಮಾನ್ ಭಾಷಾ, ಚನ್ನಬಸವ, ದೇವಿಂದ್ರಪ್ಪ ತಾತಾ ಗಲಗ್ ಇದ್ದರು.

## ಕುರುಬದೊಡ್ಡಿ ಸ.ಹಿ.ಪ್ರಾ.ಶಾಲೆಯಲ್ಲಿ ಬೀಳ್ಕೊಡುಗೆ ಸಮಾರಂಭ

## ಜೀವನದಲ್ಲಿ ಯಶಸ್ಸು ಕಾಣಲು ಮೊದಲು ಶ್ರಮಪಡಬೇಕು–ರಾಜ ಸಾಬ್

ಜನವಾದಿ ವಾರ್ತೆ



ರಾಯಚೂರು ಏ 03– ಜೀವನದಲ್ಲಿ ಯಶಸ್ಸು ಕಾಣಲು ಮೊದಲು ಶ್ರಮಪಡಬೇಕು. ನಂತರ ತಕ್ಕ ಫಲ ದೊರೆಯುವುದು ಎಂದು ಕುರುಬದೊಡ್ಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮುಖ್ಯಶಿಕ್ಷಕ ರಾಜ ಸಾಬ್ ಅಭಿಪ್ರಾಯಪಟ್ಟರು.

ಕುರುಬದೊಡ್ಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ 2024–25 ಸಾಲಿನ 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು ವಿದ್ಯಾರ್ಥಿ ಜೀವನ ಬಂಗಾರವಿದ್ದಂತೆ, ಅದಕ್ಕೆ ಪೂರಕವಾಗಿ ಮಕ್ಕಳು ನಿರಂತರವಾಗಿ ಅಭ್ಯಾಸ ಮಾಡಿ ಜ್ಞಾನ ಸಂಪಾದನೆ ಮಾಡಿದ್ದಲ್ಲಿ ನಿಶ್ಚಿತ ಗುರಿಯನ್ನು ಮುಟ್ಟಿ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಪ್ರತಿಯೊಂದು ವಿದ್ಯಾರ್ಥಿಯು ತಾನು ಯಾರು, ಏನು ಮಾಡಬೇಕು, ಮತ್ತೆ ಏನು ಮಾಡುತ್ತಿದ್ದೇನೆ ಎಂದು ಸ್ವತಃ ತಾನೇ ಪ್ರಶ್ನೆ ಮಾಡಿಕೊಂಡು ಅಭ್ಯಾಸ ಮಾಡಿದ್ದಲ್ಲಿ ಮುಂದಿನ ವಿದ್ಯಾಭಾಸದಲ್ಲಿ ಅಗ್ರ ಶ್ರೇಣಿಯಲ್ಲಿ ಪಾಸಾಗುವುದರಲ್ಲಿ ಯಾವುದೇ ಅನುಮಾನ ಇಲ್ಲ. ಭಯ ಹಾಗೂ ಗೊಂದಲ ಮಕ್ಕಳ ಶೈಕ್ಷಣಿಕ ಹಿನ್ನಡೆಗೆ ಕಾರಣವಾಗಬಹುದು. ಆದ್ದರಿಂದ ಮಕ್ಕಳು ಹೆದರದೆ ಧೈರ್ಯವಾಗಿ ಪರೀಕ್ಷೆಯನ್ನು ಎದುರಿಸಬೇಕು ಎಂದರು.

ವಿದ್ಯಾರ್ಥಿಗಳು ಶಿಕ್ಷಕರಿಗೆ ಡಾ. ಪುನೀತ್ ರಾಜಕುಮಾರ್ ಅವರ ಭಾವಚಿತ್ರವನ್ನು ನೆನಪಿನ ಕಾಣಿಕೆ ನೀಡಿದರು.

ಈ ಕಾರ್ಯಕ್ರಮವು ವಿದ್ಯಾರ್ಥಿಗಳು ಸಂಗೀತ, ನೃತ್ಯ ಮತ್ತು ಕಲಾತ್ಮಕ ಪ್ರದರ್ಶನಗಳಿಂದ ತುಂಬಿದ ಸಂತೋಷದಾಯಕ ವಾತಾವರಣದಲ್ಲಿ ಒಟ್ಟುಗೂಡಿಸಿತು.

ಈ ಸಂದರ್ಭದಲ್ಲಿ ಶಾಲೆಯ ಎಸ್ ಡಿಎಂಸಿ ಅಧ್ಯಕ್ಷರು ವಿರೇಶ್, ಉಪಾಧ್ಯಕ್ಷರು ಗೋವಿಂದು, ಡಿ.ಎಂ.ಸಿ ಸದಸ್ಯರುಗಳು, ಶಿಕ್ಷಕರಗಳಾದ ವಿದ್ಯಾವತಿ, ಯಶೋಧರ, ರಮಾಬಾಯಿ, ಸುರೇಶ್, ಗೋವಿಂದು, ಹಾಗೂ ಹಳೆ ವಿದ್ಯಾರ್ಥಿಗಳು,ವಿದ್ಯಾರ್ಥಿಗಳ ಪಾಲಕರು ಸೇರಿದಂತ ಅನೇಕರು ಭಾಗವಹಿಸಿದ್ದರು.

## ನೂತನ ಗ್ರಾ, ಪಂ ಕಟ್ಟಡ ಕಾಮಗಾರಿಗೆ ಚಾಲನೆ



ಜನವಾದಿ ವಾರ್ತೆ

ಮುದಗಲ್ ಏ 3– ಪಟ್ಟಣ ಸಮೀಪದ ಖೈರವಾಡಗಿ ಗ್ರಾಮ ಪಂಚಾಯತಿ ಕಾರ್ಯಾಲಯದ ನೂತನ ಕಟ್ಟಡ ಕಾಮಗಾರಿಗೆ ಅಧ್ಯಕ್ಷೆ ಮಂಜುಳಾ ದೇವಪ್ಪ ರಾಠೋಡ ಭೂಮಿ ಪೂಜೆ ನೆರವೇರಿಸುವ ಮೂಲಕ ಗುರುವಾರ ಚಾಲನೆ ನೀಡಿದರು.

ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ 20 ಲಕ್ಷ ರೂಗಳ ಮೊತ್ತದ ನೂತನ ಗ್ರಾಮ ಪಂಚಾಯತಿಯ ಕಟ್ಟಡ ನಿರ್ಮಾಣ ಮತ್ತು 10 ಲಕ್ಷ ರೂಗಳ ಮೊತ್ತದಲ್ಲಿ ಸಂಜೀವಿನಿ ಶೆಡ್ ನಿರ್ಮಾಣದ ಕಾಮಗಾರಿಗೆ ಗ್ರಾಮ ಪಂಚಾಯತಿ ಅಧ್ಯಕ್ಷರು ಭೂಮಿ ಪೂಜೆ ನೆರವೇರಿಸಿದರು

ಈ ಸಂದರ್ಭದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಾಮಪ್ಪ, ಬಿಜೆಪಿ ಮುಖಂಡ ವೆಂಕಟೇಶ ನಾಯಕ, ಸದಸ್ಯರಾದ ಗೋಪಾಲ ನಾಯ್ಕ್, ತಿಪ್ಪಣ್ಣ ನಾಯ್ಕ್, ಹೊಳೆಯಪ್ಪ ಚಲುವಾದಿ, ಸಂಗಪ್ಪ, ಶರಣಬಸವ ಮುರಾಳ, ಭೀಮಣ್ಣ ಭಜಂತ್ರಿ, ಜೈ ಹರ್ಷವರ್ಧನ, ಗ್ರಾ, ಪಂ ಸಿಬ್ಬಂದಿ ದೇವಪ್ಪ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು

## ಬೆಂಕಿಗೆ ಆಹುತಿಯಾದ ಬಣವಿ



ಜನವಾದಿ ವಾರ್ತೆ

ಮುದಗಲ್ ಏ 3– ಆಕಸ್ಮಿಕ ಬೆಂಕಿ ತಗುಲಿ ಎರಡು ಮೇವಿನ ಬಣವಿಗಳು ಬೆಂಕಿಗೆ ಆಹುತಿಯಾದ ಘಟನೆ ಸಮೀಪದ ಜನತಾಪೂರ ಗ್ರಾಮದಲ್ಲಿ ನಡೆದಿದೆ.

ಜನತಾಪೂರು ಗ್ರಾಮದ ರೈತ ಅಮರೇಗೌಡ ಎನ್ನುವರು ಜಾನುವಾರುಗಳಿಗೆ ಒಂದು ವರ್ಷ ಆಗುವಷ್ಟು ಸಂಗ್ರಹಣೆ ಮಾಡಿದ ಎರಡು ಬಣವಿಗಳಿಗೆ ಬೆಂಕಿ ತಗುಲಿದ ಪರಿಣಾಮ ಸುಮಾರು 2ಲಕ್ಷ ರೂ ಮೊತ್ತದ ಮೇವಿನ ಬಣವಿಗಳು ಸುಟ್ಟಿವೆ ಸ್ಥಳಕ್ಕೆ ಅಗ್ನಿ ಶಾಮಕ ದಳದವರಿಂದ ಬೆಂಕಿ ನಂದಿಸುವಲ್ಲಿಮುಂದುದಾಗಿದ್ದಾರೆ ಆದರೆ ಯಾವುದೆ ಪ್ರಯೋಜನವಾಗಿಲ್ಲ ಈ ಕೂಡಲೆ ಈ ರೈತನಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದರು.

## ಸಚಿವ ಶಿವರಾಜ ತಂಗಡಗಿ ಯವರಿಂದ ಹಿರಿಯ ಸಾಹಿತಿ ರಮೇಶಬಾಬು ಯಾಳಗಿಯವರಿಗೆ ಸನ್ಮಾನ



ಜನವಾದಿ ವಾರ್ತೆ

ಮಾನ್ವಿ ಏ 3– ಪಟ್ಟಣದ ಕಲ್ಮಠ ಕಾಲೇಜಿನ ಉಪನ್ಯಾಸಕರು ಹಾಗೂ ಹಿರಿಯ ಸಾಹಿತಿ ರಮೇಶಬಾಬು ಯಾಳಗಿ ರವರು ಬುಧುವಾರ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ರಾಜ್ಯಮಟ್ಟದ ಆದ್ಯ ವಚನಕಾರ ದೇವರ ದಾಸಿಮಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ದಾಸಿಮಯ್ಯನವರ ವಚನಗಳಲ್ಲಿ ಜೀವನ ಮೌಲ್ಯಗಳು ಕುರಿತು ವಿಶೇಷ ಉಪನ್ಯಾಸ ನೀಡಿರುವುದಕ್ಕೆ ರಾಜ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ರವರು ಸನ್ಮಾನಿಸಿ ಗೌರವಿಸಿದರು.

## ಏ.06 ಕ್ಕೆ ನೀಲಗಲ್ ಕ್ಯಾಂಪ್‌ನಲ್ಲಿ ರಥೋತ್ಸವ



ಜನವಾದಿ ವಾರ್ತೆ

ಸಿರವಾರ ಏ 03– ಸಮೀಪದ ನೀಲಗಲ್ ಕ್ಯಾಂಪ್ ನ ಆರಾಧ್ಯ ದೈವ ಶ್ರೀ ಪಂಚಮುಖಿ ಆಂಜನೇಯ ಸ್ವಾಮಿ ಹಾಗು ಶ್ರೀ ಕಾಶಿ ವಿಶ್ವನಾಥ ಸ್ವಾಮಿ ದೇವಸ್ಥಾನದ ರಥೋತ್ಸವವು ಏ06 ಕ್ಕೆ ಭಾನುವಾರ ಜರುಗಲಿದೆ ಎಂದು ದೇವಸ್ಥಾನ ಸಮಿತಿ ತಿಳಿಸಿದೆ.

ಪ್ರತಿ ವರ್ಷದ ಪದ್ಧತಿಯಂತೆ ಈ ವರ್ಷವೂ ಸಹ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ವಿಧಿ ವಿಧಾನಗಳು ನೆರವೇರಲಿದೆ. ವಿವಿಧ ಪೂಜಾ ಕೈಂಕರ್ಯಗಳು, ಭಕ್ತರಿಂದ ಹರಕೆ ಸೇವೆ, ನೈವೇದ್ಯ ಸಮರ್ಪಣೆ, ಭಕ್ತರಿಗೆ ಪ್ರಸಾದ ವಿತರಣೆ ಸೇವೆಗಳು ನೆರವೇರಲಿದೆ ಎಂದು ದೇವಸ್ಥಾನ ಸಮಿತಿ ಮತ್ತು ಭಕ್ತ ಮಂಡಳಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ನಿಂದ ತಂಬಾಕು ಮುಕ್ತ ಸಮಾಜಕ್ಕಾಗಿ ಜಾಗೃತಿ ಜಾಥಾ




ಜನವಾದಿ ವಾರ್ತೆ

ಸಿರವಾರ ಏ 03– ಪಟ್ಟಣದ ಶಾಂತಿನಿಕೇತನ ಶಾಲೆಯ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಬೇಸಿಗೆ ಶಿಬಿರದ ಅಂಗವಾಗಿ ನಡೆಯುತ್ತಿರುವ ವಿವಿಧ ಕಾರ್ಯಕ್ರಮಗಳ ಭಾಗವಾಗಿ ಗುರುವಾರ ಪಟ್ಟಣದ ಮಖ್ಯರಸ್ತೆಯಲ್ಲಿ

ತಂಬಾಕು ಮುಕ್ತ ಸಮಾಜಕ್ಕಾಗಿ ಜಾಗೃತಿ ಜಾಥಾ ನಡೆಸಿದರು.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ, ಜಿಲ್ಲಾ ಸಂಸ್ಥೆ ರಾಯಚೂರು, ಸ್ಥಳೀಯ ಸಂಸ್ಥೆ, ಮಾನ್ವಿ ಮತ್ತು ಶಾಂತಿನಿಕೇತನ ಪ್ರಾಥಮಿಕ ಮತ್ತು ಪ್ರೌಢಶಾಲೆ, ಇವರ ಸಹಕಾರದಲ್ಲಿ ನಡೆಯುತಿರುವ ಸ್ಕೌಟ್ಸ್ ಮತ್ತು ಗೈಡ್ ಮಕ್ಕಳ 6 ದಿನಗಳ ಬೇಸಿಗೆ ಶಿಬಿರದ 3ನೇ ದಿನದಂದು ,ತಂಬಾಕು ಮುಕ್ತ ಸಮಾಜಕ್ಕಾಗಿ ಜಾಗೃತಿ ಜಾಥಾ ಮಾಡಲಾಯಿತು. ದಂತ ವೈದ್ಯ ಡಾ.ಹನುಮಂತರಾಯ ಅವರು ಮಕ್ಕಳಿಗೆ ದಂತ ಪರೀಕ್ಷೆಯನ್ನು ನಿರ್ವಹಿಸಿ, ಹಲ್ಲು ಮತ್ತು ಬಾಯಿಯ ಆರೋಗ್ಯದ ಬಗ್ಗೆ ಅರಿವು ಮೂಡಿಸಿದರು. ತಂಬಾಕಿನ ಸೇವೆಯಿಂದಾಗುವ ದುಷ್ಪರಿಣಾಮಗಳ ಬಗೆಗೆ ವಿವರಣೆ ನೀಡಿದರು, ನಂತರ ಮಕ್ಕಳಿಗೆ ಹಣ್ಣು ಮತ್ತು ಮಜ್ಜಿಗೆ ವಿತರಿಸಲಾಯಿತು.

ಶಾಂತಿನಿಕೇತನ ಶಾಲೆಯ ಪ್ರಾಚಾರ್ಯೆ ಅನುರಾಧಾ ಯು ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್ ಶಿಕ್ಷಕರು ಇದ್ದರು.

## ವಿವಿಧ ವಸತಿ ನಿಲಯಗಳ ಮಂಜೂರಾತಿಗೆ ಮುಖ್ಯಮಂತ್ರಿಗೆ ಒತ್ತಾಯ

ಜನವಾದಿ ವಾರ್ತೆ




ಸಿರವಾರ ಏ 03– ತಾಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಇಲಾಖೆ, ಪರಿಶಿಷ್ಟ ವರ್ಗಗಳ ಇಲಾಖೆ ಅಡಿಯಲ್ಲಿ ವಸತಿ ನಿಲಯಗಳನ್ನು ಮಂಜೂರು ಮಾಡುವಂತೆ ಒತ್ತಾಯಿಸಿ ದಲಿತ ವಿದ್ಯಾರ್ಥಿ ಪರಿಷತ್ ತಾಲೂಕು ಸಮಿತಿ ವತಿಯಿಂದ ತಹಶಿಲ್ದಾರರ ಮೂಲಕ ಮುಖ್ಯಮಂತ್ರಿ ಗಳಿಗೆ ಗುರುವಾರ ಮನವಿ ಸಲ್ಲಿಸಲಾಯಿತು.

ತಾಲೂಕ ಘೋಷಣೆಯಾಗಿ ಹಲವು ವರ್ಷಗಳೇ ಕಳೆದರೂ,ಕೆಲವೊಂದನ್ನು ಬಿಟ್ಟು ಯಾವುದೇ ಸರ್ಕಾರಿ ಕಚೇರಿಗಳಿಲ್ಲ. ಅಭಿವೃದ್ಧಿ ಮರೀಚಿಕೆಯಾಗಿದೆ. ಯಾವುದೇ ಅನುದಾನವನ್ನು ಘೋಷಿಸದೆ ಹಿಂದುಳಿದ ತಾಲೂಕು ಎನ್ನಲು ಸರ್ಕಾರ ವೇ ಪರೋಕ್ಷವಾಗಿ ಕಾರಣವಾಗಿದೆ.

ತಾಲೂಕಿನ ಬಡ ವಿದ್ಯಾರ್ಥಿಗಳ ಅನುಕೂಲಕ್ಕಾಗಿ, ಅವರು ವಿದ್ಯಾಭ್ಯಾಸ ಮುಂದುವರೆಸಲು ಸರ್ಕಾರ ಅನುವು ಮಾಡಿಕೊಡಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಿದರು.

ಮನವಿಯನ್ನು ತಿರಸ್ಕರಿಸಿ, ವಿಳಂಬ ಮಾಡಿದರೆ ಸಂಘಟನೆಯ ವತಿಯಿಂದ ಪ್ರತಿಭಟನೆ, ಹೋರಾಟ ನಡೆಸಲಾಗುವುದು ಎಂದು ಸಂಘಟನೆಯ ಪದಾಧಿಕಾರಿಗಳು ತಿಳಿಸಿದ್ದಾರೆ.

ಸಂಘಟನೆಯ ತಾಲೂಕು ಘಟಕದ ಅಧ್ಯಕ್ಷ ಬಾಲಸ್ವಾಮಿ,ಮಹಾಶಕ್ತಿ ಮಹಿಳಾ ಸಬಲಿಕರಣ ಸಂಘದ ಸಂಸ್ಥಾಪಕಿ ಹಾಗು ರಾಜ್ಯಾಧ್ಯಕ್ಷೆ ವಿಜಯರಾಣಿ ಸೇರಿದಂತೆ ಇತರರು ಇದ್ದರು.

## ತೆರಿಗೆ ಪಾವತಿಯಲ್ಲಿ ರಿಯಾಯತಿ – ನರಸರೆಡ್ಡಿ

ಜನವಾದಿ ವಾರ್ತೆ



ಮುದಗಲ್ ಏ 3– ಆಸ್ತಿಯ ಮಾಲೀಕರು ಎಪ್ರಿಲ್ ತಿಂಗಳನಲ್ಲಿ ತೆರಿಗೆ ಪಾವತಿಸಿದಲ್ಲಿ ಶೇ 5% ರಷ್ಟು ರಿಯಾಯತಿ ಪಡೆಯಬಹುದಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ನರಸರೆಡ್ಡಿ ಹೇಳಿದರು.

ಪತ್ರಿಕೆ ಜೊತೆ ಮಾತನಾಡಿ ಅವರು ಪುರಸಭೆ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರು ಹಾಗೂ ಆಸ್ತಿ ಮಾಲಿಕರು 2025–26 ನೇ ಸಾಲಿನ ಆಸ್ತಿ ತೆರಿಗೆ ಉದ್ದಿಮೆ ಪರವಾರಿಗೆ ದಾರರು ನೀರಿನ ಕರ ಹಾಗೂ ವಾಣಿಜ್ಯ ಮಳಿಗೆಗಳ ಬಾಡಿಗೆ & ಇನ್ನಿತರ ತೆರಿಗೆಗಳ ಪಾವತಿಸಿ ಶೇ 5% ರಷ್ಟು ರಿಯಾಯತಿ ಪಡೆದುಕೊಂಡು ಇದರ ಸದುಪಯೋಗ ಪಡಿಸಿಕೊಂಡು ಪುರಸಭೆ ಅಭಿವೃದ್ಧಿ ಹಾಗೂ ಕಾರ್ಯಗಳಿಗೆ ಸಹಕರಿಸಬೇಕೆಂದು ಸಾರ್ವಜನಿಕರಿಗೆ ಪುರಸಭೆ ಮುಖ್ಯಾಧಿಕಾರಿ ನರಸರೆಡ್ಡಿ ಕರೆ ನೀಡಿದರು.

Printed by , Published by, Owned by : basavaraj H , Printed and Published at Basavashree Printers and Publishers, H.No.1-11-54/32, Prashanth Colony, RAICHUR-584101. Editor. BASAVARAJ H